ಸಂಪುಟ : 10 ಸಂಚಿಕೆ: 97 ಪುಟ : 4+2 ಬೆಲೆ: 3.00 ಶನಿವಾರ ಮೇ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 97 Pages : 4+2 Price : 3.00 Saturday May 17 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಸಾರ್ವಜನಿಕ ಆಸ್ಪತ್ರೆ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನಿಯಮಾವಳಿಯಂತೆ ನೇಮಕಾತಿಗೊಳಿಸಲು ಆದೇಶಿಸಲಾಗಿದೆ. ಜನರಲ್ ಮೆಡಿಸನ್, ಜನರಲ್ ಸರ್ಜರಿ, ಚಿಕ್ಕಮಕ್ಕಳ ತಜ್ಞರು, ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರು ಅರವಳಿಕೆ ತಜ್ಞರು, ಆರ್ಥೋಪೆಡಿಕ್ಸ್, ಇ.ಎನ್.ಟಿ ತಜ್ಞರು, ಚರ್ಮರೋಗ ತಜ್ಞರು , ದಂತ ವೈದ್ಯರು ಸದರಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಆವಶ್ಯಕತೆಗೆ ಅನುಗುಣವಾಗಿ ತಾತ್ಕಾಲಿಕವಾಗಿ ಅಥವಾ ಕ್ರಮಬದ್ಧವಾಗಿ ನೇಮಕವಾಗುವವರೆಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಅಹ್ವಾನಿಸಲಾಗಿದೆ.

ಇಚ್ಛೆಯುಳ್ಳ ಅಭ್ಯರ್ಥಿಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಕೊಠಡಿ ಸಂ–101, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಇಲ್ಲಿಗೆ ಅರ್ಜಿಗಳನ್ನು ಮೇ 23 ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ನರೇಗಲ್ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ್–ಡೇ ಯೋಜನೆಯ ಸ್ವ ಸಹಾಯ ಸದಸ್ಯರನ್ನು ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದೆ.

ಕನಿಷ್ಠ ಎಸ್‌ಎಸ್‌ಎಲ್‌ಸಿ/ 10 ಣು ರಿಭಿ , ಕನ್ನಡ ಭಾಷೆ ಓದು ಬರಹ ಜ್ಞಾನ ಹೊಂದಿರಬೇಕು. 18–45 ವರ್ಷ ವಯೋಮಾನದವರಾಗಿರಬೇಕು. ಆಸಕ್ತಿ ಇರುವ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲಾತಿಯೊಂದಿಗೆ ಮೇ 31 ರ ಸಂಜೆ 5 ಗಂಟೆಯೊಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಮಾಹಿತಿಯನ್ನು ಭರ್ತಿ ಮಾಡಿ ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ್ ನರೇಗಲ್ ಈ ವಿಳಾಸಕ್ಕೆ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು. ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗೆ ನರೇಗಲ್ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ನಾಗರಿಕರ ವೇದಿಕೆ ವತಿಯಿಂದ ಸೈನಿಕರ ಕಾರ್ಯಕ್ಕೆ ಮೆಚ್ಚುಗೆ, 'ಆಪರೇಷನ್ ಸಿಂಧೂರ'ಕ್ಕೆ ಶ್ಲಾಘನೆ

# ರಾಷ್ಟ್ರಭಕ್ತಿ ಸ್ಫುರಿಸಿದ 'ತಿರಂಗಾ ಯಾತ್ರೆ'




**ಮಾಜಿ ಸೈನಿಕರ ಸಾಥ್**

ರಾಷ್ಟ್ರ ರಕ್ಷಣೆಗಾಗಿ ನಾಗರಿಕರ ವೇದಿಕೆ ವತಿಯಿಂದ ಶುಕ್ರವಾರ ನಗರದಲ್ಲಿ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆಯಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ಅವರ ನೇತೃತ್ವದಲ್ಲಿ ನೂರಾರು ಮಾಜಿ ಸೈನಿಕರು ರಾಷ್ಟ್ರ ಧ್ವಜ ಹಿಡಿದು ಹೆಜ್ಜೆ ಹಾಕಿ ಗಮನ ಸೆಳೆದರು.



■ವಿಜಯಸಾಕ್ಷಿ ಸುದ್ದಿ, ಗದಗ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿ ಬಳಿಕ ಶತ್ರು ರಾಷ್ಟ್ರ ಪಾಕಿಸ್ತಾನಕ್ಕೆ ಪಾಠ ಕಲಿಸಲು ಕೇಂದ್ರ ಸರ್ಕಾರ ಪಾಕಿಸ್ತಾನದ ಮೇಲೆ ನಡೆಸಿದ 'ಆಪರೇಷನ್ ಸಿಂಧೂರ'ಕ್ಕೆ ಬೆಂಬಲಿಸುವ ಹಾಗೂ ಸೈನಿಕರ ಕಾರ್ಯವನ್ನು ಶ್ಲಾಘಿಸುವ ಉದ್ದೇಶದಿಂದ ರಾಷ್ಟ್ರ ರಕ್ಷಣೆಗಾಗಿ ನಾಗರಿಕರ ವೇದಿಕೆ ವತಿಯಿಂದ ಶುಕ್ರವಾರ ನಗರದಲ್ಲಿ ತಿರಂಗಾ ಯಾತ್ರೆ ಜರುಗಿತು.

ಶುಕ್ರವಾರ ಸಂಜೆ ಸುರಿಯುತ್ತಿರುವ ಮಳೆಯಲ್ಲಿಯೇ ನಗರದ ಜೋಡು ಮಾರುತಿ ದೇವಸ್ಥಾನದಿಂದ ಪ್ರಾರಂಭಗೊಂಡ ತಿರಂಗಾ ಯಾತ್ರೆಯು ಮಹಾತ್ಮ ಗಾಂಧಿ ವೃತ್ತದವರೆಗೆ ಸಾಗಿತು. ದಾರಿಯುದ್ದಕ್ಕೂ ದೇಶಭಕ್ತಿಯ ಘೋಷಣೆಗಳು ಮೊಳಗಿದವು. ಸುರಿಯುತ್ತಿದ್ದ ಮಳೆಯಲ್ಲಿ ನೆನೆಯುತ್ತಲೇ ಮಾಜಿ ಸಚಿವ ಹಾಗೂ ನರಗುಂದ ಶಾಸಕ ಸಿ.ಸಿ. ಪಾಟೀಲ ಯಾತ್ರೆಗೆ ಚಾಲನೆ ನೀಡಿ, ಹೆಜ್ಜೆ ಹಾಕಿದ್ದು, ನೆರೆದಿದ್ದವರಲ್ಲಿ ದೇಶಾಭಿಮಾನವನ್ನು ಇಮ್ಮಡಿಗೊಳಿಸಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ಪಾಕಿಸ್ತಾನದ ಪ್ರಚೋದಿತ ಉಗ್ರರಿಂದ ನಡೆದ ಹತ್ಯಾಕಾಂಡವು ಸಮಗ್ರ ಭಾರತೀಯರ ಸ್ವಾಭಿಮಾನಕ್ಕೆ ಮಾಡಿದ ಅವಮಾನವಾಗಿದೆ. ದೇಶದಲ್ಲಿ ಅಶಾಂತಿ, ಅಸ್ಥಿರತೆ ಸೃಷ್ಟಿಗೆ ಪಾಕಿಸ್ತಾನ ಸದಾ ಪ್ರಯತ್ನಿಸುತ್ತಲೇ ಇರುತ್ತದೆ. ಆದರೆ, ಇಂತಹ ಪೈಶಾಚಿಕ ಕೃತ್ಯಗಳು ಯಶಸ್ಸು ಸಾಧಿಸದಂತೆ ನಾವೆಲ್ಲರು ಒಗ್ಗೂಡಿ ಜಾಗೃತರಾಗಬೇಕಿದೆ ಎಂದು ಹೇಳಿದರು.

ಆಪರೇಷನ್ ಸಿಂಧೂರ ಮೂಲಕ ನಮ್ಮ ಸೇನಾಪಡೆಗಳು ಮತ್ತು ಕೇಂದ್ರ ಸರ್ಕಾರ ಉಗ್ರರ ಹಾಗೂ ಅದರ ಪೋಷಕ ಪಾತ್ರ ನಿರ್ವಹಿಸುತ್ತಿರುವ ಪಾಕಿಸ್ತಾನಕ್ಕೆ ನಿಖರ ಹಾಗು ಗರಿಷ್ಠ ಪ್ರಮಾಣದ ಶಿಕ್ಷೆಯನ್ನ ಈಗಾಗಲೇ ನೀಡಿವೆ. ದೇಶದ ಹಿತಕ್ಕಾಗಿ ಗಡಿಯಲ್ಲಿ ಸದಾ ಸನ್ನದ್ಧ ಸ್ಥಿತಿಯಲ್ಲಿರುವ ಭಾರತೀಯ ಸೈನಿಕರ ಜೊತೆಗೆ ಜವಾಬ್ದಾರಿಯುತ ನಾಗರಿಕರಾದ ನಾವೆಲ್ಲರೂ ನಿಲ್ಲಬೇಕಿದೆ. ಆ ಮೂಲಕ ರಾಷ್ಟ್ರದ ಏಕತೆ ಮತ್ತು ಅಖಂಡತೆಯನ್ನ ಸಾಕ್ಷೀಕರಿಸೋಣ ಎಂದು ಹೇಳಿದರು. ಈ ಸಂದರ್ಭದಲ್ಲಿ ಮುಕ್ತಣ್ಣೇಶ್ವರ ಮಠದ ಶಂಕರಾನಂದ ಸ್ವಾಮೀಜಿ, ಯುವ ಮುಖಂಡ ಉಮೇಶಗೌಡ ಸಿ.ಪಾಟೀಲ, ನಗರಸಭೆ ಸದಸ್ಯ ಚಂದ್ರು ತಡಸದ, ಮುಖಂಡರಾದ ಪ್ರಶಾಂತ ನಾಯ್ಕರ, ಮಹಾಂತೇಶ ಬಾತಾಖಾನಿ, ವಸಂತ ಮೇಟಿ, ಆರ್.ಬಿ. ದಾನಪ್ಪಗೌಡ್ರ, ಶಿವರಾಜಗೌಡ ಹಿರೇಮನಿಪಾಟೀಲ, ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ ಸೇರಿದಂತೆ ಅನೇಕರು ಇದ್ದರು.

ಸಾರ್ವಜನಿಕರು, ಮಾಜಿ ಸೈನಿಕರು, ವಿದ್ಯಾರ್ಥಿಗಳು, ವಕೀಲರು, ವೈದ್ಯರು, ರೈತರು, ಶಿಕ್ಷಕರು, ಕೂಲಿ ಕಾರ್ಮಿಕರು, ಆಟೋ ಚಾಲಕರು, ವ್ಯಾಪಾರಸ್ಥರು, ವಿವಿಧ ಕ್ಷೇತ್ರದ ವೃತ್ತಿಪರರು ಹೆಮ್ಮೆಯ ತಿರಂಗಾ ಯಾತ್ರೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದರು.

### ಸಂತೆ ಮಾರುಕಟ್ಟೆಯಲ್ಲಿ ಬಾಲಕಾರ್ಮಿಕರ ರಕ್ಷಣಾ ಕಾರ್ಯಾಚರಣೆ

# 13 ಬಾಲ ಕಾರ್ಮಿಕರ ರಕ್ಷಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ರಕ್ಷಣಾ ಘಟಕ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಮಕ್ಕಳ ಸಹಾಯವಾಣಿ ಹಾಗೂ ಪುರಸಭೆ ಲಕ್ಷ್ಮೇಶ್ವರ ಇವರ ಸಹಯೋಗದಲ್ಲಿ ಶುಕ್ರವಾರ ಸಂತೆಯ ದಿನ ಬಾಲಕಾರ್ಮಿಕರ ರಕ್ಷಣಾ ಕಾರ್ಯಾಚರಣೆ ಕೈಗೊಂಡು 13 ಬಾಲ ಕಾರ್ಮಿಕರನ್ನು ರಕ್ಷಿಸಿ ಮಕ್ಕಳ ಕಲ್ಯಾಣ ಸಮಿತಿಯ ವಿಶೇಷ ಸಭೆಗೆ ಹಾಜರುಪಡಿಸಲಾಯಿತು. ಈ ವೇಳೆ ಮಾತನಾಡಿದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಜಯದೇವಿ ಕವಲೂರ, ಬಾಲಕಾರ್ಮಿಕ ಮಕ್ಕಳನ್ನು ಗುರುತಿಸುವ ಕಾರ್ಯಾಚರಣೆಯ ಹಿಂದೆ ಅವರ ನಿಜವಾದ ಕಾಳಜಿ, ಪಾಲನೆ–ಪೋಷಣೆ–ರಕ್ಷಣೆ ಉದ್ದೇಶವಿದೆ. ಇಂತಹ ಮಕ್ಕಳು ಮನೆಯಲ್ಲಿ ತಂದೆ–ತಾಯಿಗಳ ಅನಾರೋಗ್ಯ, ಬದುಕಿನ ಅಗತ್ಯತೆ, ಶಾಲೆ ರಜೆ ಇದ್ದ ಕಾರಣ ಅನಿವಾರ್ಯವಾಗಿ ಕೆಲಸಕ್ಕೆ ಸೇರಿಕೊಳ್ಳುತ್ತಾರೆ. ಅಂತಹ ಅರ್ಹ ಮಕ್ಕಳಿಗೆ ಸರ್ಕಾರ ಹಾಗೂ ಮಕ್ಕಳ ಕಲ್ಯಾಣ ಸಮಿತಿಯಿಂದ ಪಾಲಕರ ಹೊರತುಪಡಿಸಿ ಪ್ರತಿ ತಿಂಗಳು 4 ಸಾವಿರ ರೂ ಸಹಾಯಧನ ಕಲ್ಪಿಸುವ ಯೋಜನೆಯಡಿ ಸೇರಿಸಲು ಈ ಕಾರ್ಯಚರಣೆ ನಡೆಸಲಾಗುತ್ತದೆ. ಕಾರ್ಯಾಚರಣೆಯಲ್ಲಿ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಸುಪರ್ಣ ಬ್ಯಾಹಟ್ಟಿ, ದೇವೇಂದ್ರಪ್ಪ ಈರಗಾರ, ಸಮಾಲೋಚಕ ಪ್ರಕಾಶ ಗಾಣಿಗೇರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕ್ ಹಳ್ಳೂರ, ರಮೇಶ ಕಳ್ಳಿಮನಿ, ಲಲಿತಾ ಕುಂಬಾರ, ಮಲ್ಲಪ್ಪ ಹೊಸಳ್ಳಿ, ಕಾರ್ಮಿಕ ನಿರೀಕ್ಷಕರ ಕಛೇರಿ ಸಿಬ್ಬಂದಿ ರಾಣಿ ಪಾಟೀಲ, ಮಕ್ಕಳ ಸಹಾಯವಾಣಿ ಸಿಬ್ಬಂದಿ ಅಫ್ತಾಬ ಡಾಲಾಯತ, ಗಿರಿಜಾ ಹಿರೇಮಠ, ಶಶಿಧರ ಮಠಪತಿ ಮುಂತಾದವರಿದ್ದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯ ಬಸವರಾಜ ಸಂಶಿ ಮಾತನಾಡಿ, ಬಾಲಕರರಷ್ಟೇ ಅಲ್ಲದೇ ಬಾಲಕಿಯರು ಸಹಿತ ಕೆಲವು ಕಡೆ ಕೆಲಸ ಮಾಡುತ್ತಿದ್ದು, ಅಲ್ಲಿನ ಸುರಕ್ಷಿತ ಕ್ರಮಗಳ ಜತೆಗೆ ಪೋಕ್ಸೋ ಕಾಯ್ದೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತದೆ. ಈ ವೇಳೆ ಪಾಲಕರಿಗೂ ಮಕ್ಕಳ ಪೋಷಣೆಯ ಜವಾಬ್ದಾರಿ, ಹಕ್ಕು–ಕರ್ತವ್ಯ ಮತ್ತು ಕಾಳಜಿ ಬಗ್ಗೆ ತಿಳಿ ಹೇಳಲಾಗುತ್ತದೆ. ಕುಟುಂಬ, ಸಮಾಜದಿಂದ ನಿರ್ಲಕ್ಷ್ಯ, ಶೋಷಣೆಗೊಳಗಾದ 16 ವರ್ಷದೊಳದಗಿನ ಮಕ್ಕಳಿಗೆ ವಿದ್ಯಾಭ್ಯಾಸ, ಪೋಷಣೆಗಾಗಿ 3 ವರ್ಷಗಳವರೆಗೆ 4 ಸಾವಿರ ರೂ ಸಹಾಯಧನ ಕಲ್ಪಿಸಲಾಗುವುದು ಎಂದರು.

### ಪಠ್ಯ–ಪಠ್ಯೇತರ ಚಟುವಟಿಕೆಗಳ ಸಮಾರೋಪ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ನ್ಯಾಕ್ ಬಿ ಗ್ರೇಡ್ ಮಾನ್ಯತೆ ಪಡೆದಿರುವ ನಗರದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನಲ್ಲಿ 2024–25ನೇ ಸಾಲಿನ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳ ಸಮಾರೋಪ ಸಮಾರಂಭ ಮೇ 17ರಂದು ಬೆಳಿಗ್ಗೆ 10 ಗಂಟೆಗೆ ಕಾಲೇಜಿನ ಆವರಣದಲ್ಲಿ ಜರುಗಲಿದೆ.

ಮುಖ್ಯ ಅತಿಥಿಗಳಾಗಿ ಖ್ಯಾತ ಜಾನಪದ ಕಲಾವಿದ, ಜಂತ್ಲಿ ಶಿರೂರು ಗ್ರಾಮದ ಗವಿಸಿದ್ದಯ್ಯ ಹಳ್ಳಿಕೇರಿಮಠ ಪಾಲ್ಗೊಳ್ಳುವರು. ಅಧ್ಯಕ್ಷತೆಯನ್ನು ಪ್ರಾಚಾರ್ಯ ಎಂ.ಯು. ಹಿರೇಮಠ್ ವಹಿಸುವರು. ಸಂಸ್ಕೃತಿಕ ವಿಭಾಗದ ಸಂಯೋಜಕ ಎಸ್.ಯು. ಸಜ್ಜನಶೆಟ್ಟರ್, ಕ್ರೀಡಾ ಹಾಗೂ ಎನ್‌ಎಸ್‌ಎಸ್ ಘಟಕ ಸಂಯೋಜಕರಾದ ಮಹಾಲಕ್ಷ್ಮೀ ಹುಟಗಿ, ಕಾಲೇಜು ಅಭಿವೃದ್ಧಿ ಸಮಿತಿಯ ಸರ್ವ ಸದಸ್ಯರು, ಬೋಧಕ–ಬೋಧಕೇತರ ಸಿಬ್ಬಂದಿ ವರ್ಗ, ವಿದ್ಯಾರ್ಥಿ ಪ್ರತಿನಿಧಿಗಳು, ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಾಚಾರ್ಯರು ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

### ವಿದ್ಯುತ್ ಅದಾಲತ್ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಶಹರ/ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿನ 3ನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗದಗ ಶಹರ/ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿದೆ. ಈ ಹಿನ್ನೆಲೆಯಲ್ಲಿ ಮೇ. 17ರಂದು ಮಧ್ಯಾಹ್ನ 3 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲಾಗುವುದು. ಆದ್ದರಿಂದ ಸಾರ್ವಜನಿಕರು ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕೆಂದು ಹೆಸ್ಕಾಂ ಪ್ರಕಟಣೆಯಲ್ಲಿ ಕೋರಲಾಗಿದೆ.

### ಶಿರಹಟ್ಟಿ ತಹಸೀಲ್ದಾರ ಕಚೇರಿಗೆ ಲೋಕಾಯುಕ್ತ ಡಿಎಸ್‌ಪಿ ಬಿರಾದಾರ ಭೇಟಿ

# ಕಚೇರಿ ಸಿಬ್ಬಂದಿಗಳಿಗೆ ಖಡಕ್ ಎಚ್ಚರಿಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶುಕ್ರವಾರ ಬೆಳಿಗ್ಗೆ ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯಕುಮಾರ ಬಿರಾದಾರ ಮತ್ತು ತಂಡ ಶಿರಹಟ್ಟಿ ತಹಸೀಲ್ದಾರ ಕಚೇರಿಗೆ ಭೇಟಿ ನೀಡಿ ವಿವಿಧ ಶಾಖೆಗಳಲ್ಲಿಯ ಕೆಲಸ–ಕಾರ್ಯಗಳನ್ನು ಸಂಜೆ 4.30ರವರೆಗೂ ಪರಿಶೀಲನೆ ನಡೆಸಿದರು.

ಲೋಕಾಯುಕ್ತ ಅಧಿಕಾರಿಗಳ ಪರಿಶೀಲನೆಯ ಸಮಯದಲ್ಲಿ ಅಟಲ್‌ಜೀ ಕೇಂದ್ರದಲ್ಲಿರುವ ಬೆಳೆ ದೃಢೀಕರಣ ಪತ್ರ ನೀಡುವ ಅರ್ಜಿಗಳನ್ನು ಪರಿಶೀಲಿಸುವ ಸಂದರ್ಭದಲ್ಲಿ ರೈತರ ಉತಾರದಲ್ಲಿರುವ ಬೆಳೆಯ ಬದಲಾಗಿ ಬೆಳೆ ದೃಢೀಕರಣ ಪತ್ರದಲ್ಲಿ ಬೇರೆ ಬೆಳೆಯನ್ನು ನಮೂದಿಸಿದ್ದು ಕಂಡುಬಂದಿದ್ದರಿಂದ ಅನೇಕ ಅರ್ಜಿಗಳನ್ನು ಅಧಿಕಾರಿಗಳು ಪರಿಶೀಲನೆ ನಡೆಸಿದರು. ಈ ವೇಳೆ ರೈತರ ಜಮೀನಿನಲ್ಲಿಯ ಜಿಪಿಎಸ್ ಫೋಟೋ ಇರದೇ ಇರುವುದು, ಒಂದೇ ಫೋಟೋವನ್ನು 2–3 ರೈತರ ಉತಾರಗಳ ಜಮೀನುಗಳ ಅರ್ಜಿಗೆ ಲಗತ್ತಿಸಿರುವುದು ಕಂಡು ಬಂದಿತು. ಈ ಬಗ್ಗೆ ಶಾಖೆಯನ್ನು ನಿರ್ವಹಿಸುವ ಸಿಬ್ಬಂದಿಗಳನ್ನು ಕೇಳಿದಾಗ, ಗ್ರಾಮ ಲೆಕ್ಕಾಧಿಕಾರಿಗಳ ವರದಿ ಆಧಾರದ ಮೇಲೆ ಬೆಳೆ ದೃಢೀಕರಣ ಪತ್ರ ನೀಡಲಾಗುತ್ತಿದೆ ಎಂದರು. ಇದಕ್ಕೆ ಲೋಕಾಯುಕ್ತ ಅಧಿಕಾರಿಗಳು ಸ್ಥಳ ಪರಿಶೀಲನೆ ಇಲ್ಲದೇ, ಜಿಪಿಎಸ್ ಫೋಟೋ ಇಲ್ಲದೇ ಪ್ರಮಾಣ ಪತ್ರ ನೀಡುವುದರಿಂದ ನಿಜವಾದ ರೈತರಿಗೆ ಅನ್ಯಾಯವಾಗುತ್ತದೆ. ಇದನ್ನು ಸರಿಪಡಿಸಿಕೊಳ್ಳದಿದ್ದರೆ ಶಿಸ್ತು ಕ್ರಮಕ್ಕೆ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ಹೇಳಿದರು.

ವೃದ್ಧಾಪ್ಯ ವೇತನಕ್ಕಾಗಿ ಸಲ್ಲಿಸಿದ ಅರ್ಜಿಗಳನ್ನು ಪರಿಶೀಲಿಸಿದಾಗ, ಅಲ್ಲಿಯೂ ವಯಸ್ಸಿನ ದಾಖಲಾತಿ ತಿದ್ದುಪಡಿಯಾಗಿದೆ ಎಂದು ಗ್ರಾಮಲೆಕ್ಕಾಧಿಕಾರಿ ಅನೇಕ ಅರ್ಜಿಗಳನ್ನು ರದ್ದುಗೊಳಿಸಿದ್ದು, ದಾಖಲೆ ಪರಿಶೀಲಿಸಿದಾಗ ತಿದ್ದುಪಡಿಯಾಗಿರುವುದು ಕಂಡು ಬರುತ್ತಿಲ್ಲ. ಇನ್ನೂ ಕೆಲವರು ಅರ್ಹತೆ ಇದ್ದರೂ ಸಹ ಅಂಥವರ ಅರ್ಜಿಗಳನ್ನು ರದ್ದುಗೊಳಿಸಿದ್ದಾರೆ. ಇದರಿಂದ ಸರಕಾರದ ಸೌಲಭ್ಯದಿಂದ ಅನೇಕರು ವಂಚಿತರಾಗುತ್ತಿದ್ದಾರೆ ಎಂದು ಸಿಬ್ಬಂದಿಗಳಿಗೆ ಲೋಕಾಯುಕ್ತ ಅಧಿಕಾರಿಗಳು ತರಾಟೆಗೆ ತೆಗೆದುಕೊಂಡರು. ▸▸3ನೇ ಪುಟಕ್ಕೆ



ಲೋಕಾಯುಕ್ತ ಅಧಿಕಾರಿಗಳ ತಂಡ ವಿವಿಧ ಶಾಖೆಗಳಲ್ಲಿ ಪರಿಶೀಲನೆ ನಡೆಸುತ್ತಿದ್ದಂತೆ ಮಾಹಿತಿ ನೀಡುವಲ್ಲಿ ವಿವಿಧ ಶಾಖೆಗಳ ಸಿಬ್ಬಂದಿಗಳು ತಡವರಿಸಿದರು. ಸರಿಯಾಗಿ ರಜಿಸ್ಟರ್ ನಿರ್ವಹಣೆ ಮಾಡದೇ ಇರುವವರಿಗೆ, ತಮ್ಮ ಕೆಲಸ–ಕಾರ್ಯದ ಬಗ್ಗೆ ಮಾಹಿತಿ ಇಲ್ಲದ ಸಿಬ್ಬಂದಿಗಳಿಗೆ ಲೋಕಾಯುಕ್ತ ಅಧಿಕಾರಿಗಳು ಖಡಕ್ ಎಚ್ಚರಿಕೆ ನೀಡಿ ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕೆಂದು ಸೂಚನೆ ನೀಡಿದರು.

### ವಾಹನ ಸಂಚಾರ ದಟ್ಟಣೆ ನಿಯಂತ್ರಣ ಕಾರ್ಯಾಚರಣೆಗಿಳಿದ ಲಕ್ಷ್ಮೇಶ್ವರ ಪೊಲೀಸರು

# ನಿಯಮ ಉಲ್ಲಂಘಿಸುವವರಿಗೆ ದಂಡದ ಬಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಮುಖ್ಯ ಬಜಾರ್ ರಸ್ತೆಯಲ್ಲಿ ವಾಹನ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಕಳೆದ 2–3 ದಿನಗಳಿಂದ ಪೊಲೀಸ್ ಇಲಾಖೆ ಕಾರ್ಯಪ್ರವೃತ್ತವಾಗಿದೆ.

ಪಟ್ಟಣದ ಗ್ರಾಮ ಚಾವಡಿಯಿಂದ ಭರಮದೇವರ ಸರ್ಕಲ್‌ವರೆಗೆ ಸಿಸಿ ರಸ್ತೆ ಕಾಮಗಾರಿ ಪ್ರಾರಂಭವಾಗಿದ್ದರಿಂದ ವಾಹನಗಳ ಸುಗಮಮ ಸಂಚಾರಕ್ಕೆ ಅಡ್ಡಿಯಾಗಿದೆ. ಅಲ್ಲದೇ ಮದುವೆ, ಜಾತ್ರೆ, ಹಬ್ಬ, ಮುಂಗಾರು ಕೃಷಿ ಚಟುವಟಿಕೆ ಹೀಗೆ ಅನೇಕ ಕಾರಣದಿಂದ ಮಾರುಕಟ್ಟೆಯಲ್ಲಿ ಜನಸಂದಣಿ ಹೆಚ್ಚಾಗಿದೆ. ಸೋಮವಾರ ಮತ್ತು ಶುಕ್ರವಾರವಂತೂ ಸಂತೆ ಗದ್ದಲ ಜೋರಾಗಿರುತ್ತದೆ.

ಪಟ್ಟಣದ ಶ್ರೀ ಸೋಮೇಶ್ವರ ಪಾದಗಟ್ಟಿ ಹತ್ತಿರ, ಶಿಗ್ಗಿ ನಾಕಾ, ಹಾವಳಿ ಆಂಜನೇಯ ದೇವಸ್ಥಾನ, ಮಲ್ಲಾಡದ ಆಸ್ಪತ್ರೆ ಹತ್ತಿರ, ತರಕಾರಿ ಮಾರುಕಟ್ಟೆ ಪ್ರದೇಶದಲ್ಲಿನ ಟ್ರಾಫಿಕ್ ಸಮಸ್ಯೆಯಿಂದ ಜನತೆ ಪರದಾಡುವಂತಾಗಿತ್ತು. ಏತನ್ಮಧ್ಯೆ ಕಳೆದ 2–3 ದಿನದಿಂದ ಕಾರ್ಯಾಚರಣೆಗಿಳಿದ ಪೊಲೀಸರು ಪಾದಗಟ್ಟಿಯಿಂದ ಒನ್‌ವೇ ಮಾಡಿ ಬೈಕ್ ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳಿಗೆ ಸಂಚಾರ ನಿರ್ಬಂಧಿಸಿದ್ದಾರೆ. ಪೊಲೀಸರು ರಸ್ತೆಗಳಲ್ಲಿ ನಿಂತು ನಿಮಯ ಮೀರುವ ವಾಹನಗಳಿಗೆ, ನಂಬರ್ ಪ್ಲೇಟ್ ಇಲ್ಲದಿರುವ, ತ್ರಿಬಲ್ ರೈಡಿಂಗ್, ವ್ಹೀಲಿಂಗ್, ಎಲ್ಲೆಂದರಲ್ಲಿ ಪಾರ್ಕಿಂಗ್ ಮಾಡುವವರಿಗೆ ದಂಡ ವಿಧಿಸುವ ಕಾರ್ಯ ಕೈಗೊಂಡಿದ್ದಾರೆ. ಪಿಎಸ್‌ಐ ನಾಗರಾಜ ಗಡಾದ ನೇತೃತ್ವದಲ್ಲಿ, ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ. ರಾಥೋಡ ಸೇರಿದಂತೆ ಸಿಬ್ಬಂದಿಗಳು ಸಂಚಾರ ನಿಯಂತ್ರಣ ಕಾರ್ಯದಲ್ಲಿ ನಿರತರಾಗಿದ್ದಾರೆ. ಬೆಳಿಗ್ಗೆ ಪೊಲೀಸ್ ಇಲಾಖೆ ಪ್ರಮುಖ ರಸ್ತೆಗಳಲ್ಲಿ ಬೀದಿಗಿಳಿದು ನಿಯಮ ಉಲ್ಲಂಘಿಸುವವರಿಗೆ ದಂಡದ ಬಿಸಿ ಮುಟ್ಟಿಸುವ ಮೂಲಕ ಸಂಚಾರ ಸಮಸ್ಯೆಗೆ ಕೊಂಚ ಪರಿಹಾರ ದೊರಕಿಸುವ ಮೂಲಕ ಸಾರ್ವಜನಿಕರ ಪ್ರಶಂಸೆಗೆ ಪಾತ್ರರಾಗಿದ್ದಾರೆ.

ಸಂಚಾರ ದಟ್ಟಣೆ ನಿಯಂತ್ರಣಕ್ಕಾಗಿ ಪಟ್ಟಣದ ಪ್ರಮುಖ ಪೇಟೆ ರಸ್ತೆಯಲ್ಲಿ ಏಕಮುಖ ಸಂಚಾರ ಜಾರಿಗೊಳಿಸಲಾಗಿದೆ. ಬೆಳಿಗ್ಗೆ 11 ಗಂಟೆಯೊಳಗಾಗಿ ಭಾರಿ ವಾಹನಗಳು ಮತ್ತು ಗೂಡ್ಸ್ ವಾಹನಗಳಿಂದ ಸರಕುಗಳ ವಿಲೇವಾರಿ ಮಾಡಿಕೊಳ್ಳಬೇಕು. ಬೆಳಿಗ್ಗೆ 11 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ದ್ವಿಚಕ್ರ ವಾಹನ ಹೊರತುಪಡಿಸಿ ಇತರೆ ವಾಹನಗಳ ಸಂಚಾರ ನಿರ್ಬಂಧಿಸಲಾಗಿದೆ. ನಿಯಮ ಉಲ್ಲಂಘಿಸುವವರಿಗೆ ದಂಡ ವಿಧಿಸಲಾಗುವದು. ದ್ವಿಚಕ್ರ ವಾಹನಗಳಿಗೆ ನಂಬರ್ ಪ್ಲೇಟ್ ಇರಬೇಕು ಹಾಗೂ ಹೆಲ್ಮೆಟ್ ಧರಿಸಿ ಸಂಚಾರ ನಿಯಮಗಳನ್ನು ಪಾಲಿಸಲು ತಿಳಿಸಲಾಗಿದೆ. ಪುರಸಭೆ ಮತ್ತು ಸಾರ್ವಜನಿಕರ, ವ್ಯಾಪಾರಸ್ಥರ ಸಹಕಾರ ಅಗತ್ಯವಾಗಿದೆ.

– ನಾಗರಾಜ ಮಾಡಳ್ಳಿ, ಸಿಪಿಐ.

–ನಾಗರಾಜ ಗಡಾದ, ಪಿಎಸ್‌ಐ.

## ಸಂಪಾದಕೀಯ

# ಒಳಮೀಸಲಾತಿ ಸಮೀಕ್ಷೆಗೆ ಬೇಕು ಮತ್ತಷ್ಟು ಕಾಲಾವಕಾಶ

ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಕುರಿತು ನಡೆಯುತ್ತಿರುವ ಸಮೀಕ್ಷೆಯ ಕಾರ್ಯವನ್ನು ಮೇ 25ರ ವರೆಗೆ ವಿಸ್ತರಿಸಲಾಗಿದೆ ಎಂದು ನಾಗಮೋಹನ್ ದಾಸ್ ಅವರು ತಿಳಿಸಿದ್ದಾರೆ. ಸದ್ಯದ ಸಮೀಕ್ಷೆಯ ಪ್ರಗತಿ ಮತ್ತು ಸಿಬ್ಬಂದಿಗೆ ಎದುರಾಗುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ಗಮನಿಸಿದರೆ, ಸಮೀಕ್ಷೆಯನ್ನು ಪೂರ್ಣಗೊಳಿಸಲು ಇನ್ನಷ್ಟು ಸಮಯದ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯ ಸರ್ಕಾರವು ದೀರ್ಘಕಾಲದಿಂದ ನೆನೆಗುದಿಗೆ ಬಿದ್ದಿರುವ ಒಳಮೀಸಲಾತಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಈ ಸಮೀಕ್ಷೆಯನ್ನು ಕೈಗೆತ್ತಿಕೊಂಡಿದೆ. ಪರಿಶಿಷ್ಟ ಜಾತಿಗಳಲ್ಲಿನ ವಿವಿಧ ಪಂಗಡಗಳಿಗೆ ಜನಸಂಖ್ಯೆ ಮತ್ತು ಸಾಮಾಜಿಕ ನ್ಯಾಯದ ಆಧಾರದ ಮೇಲೆ ಮೀಸಲಾತಿಯನ್ನು ಪುನರ್ ವಿಂಗಡಣೆ ಮಾಡುವ ಉದ್ದೇಶವನ್ನು ಈ ಸಮೀಕ್ಷೆ ಹೊಂದಿದೆ.

ಆದರೆ, ಸಮೀಕ್ಷೆ ಆರಂಭವಾದಾಗಿನಿಂದಲೂ ನಿರೀಕ್ಷಿತ ವೇಗವನ್ನು ಕಾಯ್ದುಕೊಳ್ಳಲು ಸಾಧ್ಯವಾಗಿಲ್ಲ. ಸಿಬ್ಬಂದಿಗೆ ತರಬೇತಿ ನೀಡುವಲ್ಲಿನ ವಿಳಂಬ, ಸಮರ್ಪಕವಾದ ತಾಂತ್ರಿಕ ಸೌಲಭ್ಯಗಳ ಕೊರತೆ ಮತ್ತು ಕ್ಷೇತ್ರ ಮಟ್ಟದಲ್ಲಿ ಮಾಹಿತಿ ಸಂಗ್ರಹಣೆಯ ವೇಳೆ ಎದುರಾಗುತ್ತಿರುವ ಸವಾಲುಗಳು ಸಮೀಕ್ಷೆಯ ಪ್ರಗತಿಗೆ ಅಡ್ಡಿಯಾಗಿವೆ. ಹಲವೆಡೆ ಸಿಬ್ಬಂದಿಗೆ ಮೊಬೈಲ್ ಅಪ್ಲಿಕೇಶನ್ ಬಳಕೆ ಮತ್ತು ಮಾಹಿತಿ ಅಪ್‌ಲೋಡ್ ಮಾಡುವಲ್ಲಿ ತಾಂತ್ರಿಕ ತೊಂದರೆಗಳು ಉಂಟಾಗುತ್ತಿವೆ.

ಇದರಿಂದಾಗಿ ನಿಗದಿತ ಸಮಯದಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸುವುದು ಕಷ್ಟಸಾಧ್ಯವೆಂದು ಅರಿತು ಆಯೋಗವು ಗಡುವನ್ನು ವಿಸ್ತರಿಸುವ ನಿರ್ಧಾರಕ್ಕೆ ಬಂದಿದೆ.

ಒಳಮೀಸಲಾತಿ ಸಮೀಕ್ಷೆಯ ಗಡುವು ವಿಸ್ತರಣೆಯು ಸಮೀಕ್ಷೆಯ ನಿಖರತೆ ಮತ್ತು ಸಮಗ್ರತೆಯನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಕೈಗೊಂಡಿರುವ ಒಂದು ಅನಿವಾರ್ಯ ಕ್ರಮವಾಗಿದೆ. ಮುಂದಿನ ದಿನಗಳಲ್ಲಿ ಸಮೀಕ್ಷೆಯ ಕಾರ್ಯವು ವೇಗವನ್ನು ಪಡೆದುಕೊಂಡು ನಿಗದಿತ ಅವಧಿಯೊಳಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ಈ ಸಮೀಕ್ಷೆಯ ಫಲಿತಾಂಶವು ರಾಜ್ಯದ ಪರಿಶಿಷ್ಟ ಜಾತಿಗಳ ಮೀಸಲಾತಿ ನೀತಿಯಲ್ಲಿ ಮಹತ್ವದ ಬದಲಾವಣೆಗಳನ್ನು ತರುವ ಸಾಧ್ಯತೆ ಇದೆ.

## ಗದಗ ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ 835 ಕೋಟಿ ರೂ ನೆರವು

# ಸ್ವಾವಲಂಬಿ ಬದುಕಿಗೆ 'ಗೃಹಲಕ್ಷ್ಮೀ' ಆಸರೆ




ಸ್ವತಂತ್ರ ಭಾರತದಲ್ಲಿ ಮಹಿಳಾ ಸಬಲೀಕರಣಕ್ಕೆ ಮಹತ್ವದ ಹಾದಿಯನ್ನು ತೆರೆದಿರುವ ಹಲವಾರು ಯೋಜನೆಗಳಲ್ಲಿ ಕರ್ನಾಟಕ ರಾಜ್ಯದ 'ಗೃಹಲಕ್ಷ್ಮೀ ಯೋಜನೆ' ಒಂದು ದೀಪಸ್ತಂಭದಂತೆ ಬೆಳಗುತ್ತಿದೆ. ಕುಟುಂಬದ ಆರ್ಥಿಕ ಭದ್ರತೆ ಹಾಗೂ ಗೃಹಿಣಿಯ ಸ್ವಾವಲಂಬಿ ಬದುಕಿಗೆ ಇಂಧನ ನೀಡುವ ಈ ಗೃಹಲಕ್ಷ್ಮೀ ಯೋಜನೆ, ಕರುನಾಡಿನ ನಾರಿಯರಿಗೆ ಆರ್ಥಿಕ ಬಲ ನೀಡುವ ನಿಟ್ಟಿನಲ್ಲಿ ಕ್ರಾಂತಿಕಾರಕ ಹೆಜ್ಜೆಯಾಗಿದೆ.

ಕರುನಾಡಿನ ಮಹಿಳೆಯರ ಕನಸುಗಳನ್ನು ಸಾಕಾರಗೊಳಿಸಲು ಅಡಿಗಲ್ಲಾಗಿ ಗೃಹಲಕ್ಷ್ಮೀ ಯೋಜನೆ ನಿಂತಿದೆ. ರಾಜ್ಯ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಯಾದ ಕುಟುಂಬದ ಯಜಮಾನಿಗೆ ಪ್ರತಿ ತಿಂಗಳು ರೂ. 2000 ನೀಡುವ ಗೃಹಲಕ್ಷ್ಮೀ ಯೋಜನೆಯಡಿ ಗದಗ ಜಿಲ್ಲೆಯಲ್ಲಿ ಶೇ.98.02ರಷ್ಟು ಸಾಧನೆ ಮಾಡಿದ್ದು, ಇದುವರೆಗೆ 835 ಕೋಟಿ ರೂಗಳನ್ನು ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗಿದೆ. ಗದಗ ಜಿಲ್ಲೆಯಲ್ಲಿ ಮಹಿಳೆಯನ್ನು ಕುಟುಂಬದ ಯಜಮಾನಿ ಎಂದು ನಮೂದಿಸಿರುವ 2,53,646 ಪಡಿತರ ಚೀಟಿಗಳಿದ್ದು, ಅವುಗಳಲ್ಲಿ ತೆರಿಗೆ ಪಾವತಿದಾರರು, ಮರಣ ಹೊಂದಿರುವವರು, ಯೋಜನೆ ನಿರಾಕರಿಸಿರುವವರು, ವಲಸೆ ಹೋಗಿರುವವರನ್ನು ಹೊರತುಪಡಿಸಿ, ಪಡಿತರ ಚೀಟಿಗಳಲ್ಲಿ 2,48,632 ಮಂದಿಯನ್ನು ಯೋಜನೆಗೆ ಯಶಸ್ವಿಯಾಗಿ ನೋಂದಾಯಿಸಿ ಶೇ.98.02 ಸಾಧನೆ ಮಾಡಲಾಗಿದೆ.

ಈ ಮಹತ್ತರ ಸಾಧನೆಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲರ ಮುತುವರ್ಜಿ ಹಾಗೂ ಮಾರ್ಗದರ್ಶನವೇ ಕಾರಣವಾಗಿದೆ. ಗೃಹಲಕ್ಷ್ಮೀ ಯೋಜನೆಗೆ ಒಟ್ಟು 5014 ಅನರ್ಹರಾಗಿರುವವರಲ್ಲಿ 2,707 ಮಂದಿ ಆದಾಯ ತೆರಿಗೆ ಮತ್ತು ಜಿ.ಎಸ್.ಟಿ ಪಾವತಿದಾರರು, 926 ಮಂದಿ ಮರಣ ಹೊಂದಿರುವವರು, 1381 ನಿಷ್ಕ್ರಿಯಗೊಂಡ ಪಡಿತರ ಚೀಟಿಗಳು ಒಳಗೊಂಡಿದ್ದಾರೆ.

ಯೋಜನೆಯಡಿಯಲ್ಲಿ ಗದಗ ತಾಲೂಕಿನಲ್ಲಿ 80,363 ಫಲಾನುಭವಿಗಳನ್ನು ನೋಂದಾಯಿಸಿದ್ದು, ಗಜೇಂದ್ರಗಡದಲ್ಲಿ 27,102, ಲಕ್ಷ್ಮೇಶ್ವರದಲ್ಲಿ 26,773, ಮುಂಡರಗಿಯಲ್ಲಿ 35,198, ನರಗುಂದದಲ್ಲಿ 23,938, ರೋಣದಲ್ಲಿ 36,857, ಶಿರಹಟ್ಟಿದಲ್ಲಿ 23,415 ಮಂದಿಯನ್ನು ನೋಂದಾಯಿಸಲಾಗಿದೆ.

ಗೃಹಲಕ್ಷ್ಮೀ ಯೋಜನೆಯಿಂದ ಬಂದ ಹಣ ಕೂಡಿಟ್ಟು ಅತ್ತೆ-ಸೊಸೆ ತಮ್ಮ ಜಮೀನಿನಲ್ಲಿ ಬೋರ್‌ವೆಲ್ ಕೊರೆಯಿಸಿ ಕೃಷಿ ಬದುಕು ಕಟ್ಟಿಕೊಂಡಿದ್ದಾರೆ. ಗಜೇಂದ್ರಗಡ ಪಟ್ಟಣದ ನಿವಾಸಿಯಾದ ಮಾಬುಬ್ಬಿ ಮಾಲ್ದಾರ ಹಾಗೂ ಅವರ ಸೊಸೆ ರೋಷನ್‌ಬೇಗಂ ಮಾಲ್ದಾರ ಸೇರಿದಂತೆ ಸಾವಿರಾರು ಮಹಿಳೆಯರ ಬದುಕಿಗೆ ಬೆಳಕಾಗಿರುವ ಗೃಹಲಕ್ಷ್ಮೀ ಯೋಜನೆ ಯಿಂದ ಪ್ರತಿ ತಿಂಗಳು ಬಂದ ರೂ. 2000 ಹಣ ಕೂಡಿಟ್ಟು ತಮ್ಮ ಮೂರು ಎಕರೆ ಜಮೀನಿನಲ್ಲಿ 60 ಸಾವಿರ ರೂಪಾಯಿ ಖರ್ಚು ಮಾಡಿ, ಬೋರ್‌ವೆಲ್ ಕೊರೆಯಿಸಿ ಕೃಷಿ ಬದುಕು ಕಟ್ಟಿಕೊಂಡು, ಸ್ವಾವಲಂಬಿ ಜೀವನ ನಡೆಸಲು ಮುಂದಾಗಿದ್ದಾರೆ. ಅತ್ತೆ-ಸೊಸೆ ಸೇರಿಕೊಂಡು, ಯಶಸ್ವಿ ಕೃಷಿ ಮಾಡಬೇಕೆಂಬ ಹಂಬಲದಿಂದ ರಾಜ್ಯ ಸರ್ಕಾರದ ಗೃಹಲಕ್ಷ್ಮೀ ಯೋಜನೆಯಿಂದ ಬಂದ ಹಣ ಕೂಡಿಟ್ಟು ತಮ್ಮ ಮಳೆಯಾಶ್ರಿತ ಭೂಮಿಯಲ್ಲಿ ಬೋರ್‌ವೆಲ್ ಕೊರೆಯಿಸಿದ್ದು, ಸುಮಾರು 1.5 ಇಂಚು ನೀರು ದೊರಕಿತ್ತು. ಅತ್ತೆ-ಸೊಸೆಯ ಕೃಷಿ ಕನಸಿಗೆ ಶಕ್ತಿ ದೊರೆತಂತಾಗಿದೆ. ಕೃಷಿ ಕುಟುಂಬದಿಂದ ಬಂದಿರುವ ಮಾಬುಬ್ಬಿ ಮಾಲ್ದಾರ ಅವರು ವ್ಯವಸಾಯವೇ ನಂಬಿ ಬದುಕು ಸಾಗಿಸುತ್ತಿದ್ದಾರೆ. ಮಳೆಯನ್ನೇ ನಂಬಿ ಬೇಸಾಯ ಮಾಡುತ್ತಿದ್ದ, ಮಾಬುಬ್ಬಿ ಅವರಿಗೆ ಅತಿವೃಷ್ಟಿ, ಅನಾವೃಷ್ಟಿಯಿಂದಾಗಿ ಹಲವಾರು ಬಾರಿ ಹಾನಿಯಾಗಿ, ಕೃಷಿಯೇ ಬೇಡವೆಂದು ನೊಂದಿರುವ ಪ್ರಸಂಗವೂ ನಡೆದಿದೆ. ಆದರೂ ಸಹ ಛಲಬಿಡದೇ ಕೃಷಿಯಲ್ಲಿಯೇ ಬದುಕು ಮುನ್ನಡೆಸಿಕೊಂಡು ಬಂದು, ಇದೀಗ ಬೋರ್‌ವೆಲ್ ಕೊರೆಸುವ ಮೂಲಕ ಯಶಸ್ವಿ ಕೃಷಿ ಮಾಡಲು ಗೃಹಲಕ್ಷ್ಮೀ ಯೋಜನೆ ಆಸರೆಯಾಗಿದೆ.

ಇಂತಹ ಹಲವಾರು ನಿದರ್ಶನಗಳು ಗದಗ ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯ ಯಶಸ್ಸಿಗೆ ಸಾಕ್ಷಿಯಾಗಿವೆ.







ಗೃಹಲಕ್ಷ್ಮೀ ಯೋಜನೆ ನಮ್ಮ ರಾಜ್ಯದ ಮಹಿಳೆಯರಿಗೆ ಆರ್ಥಿಕವಾಗಿ ಬಲ ನೀಡುವ ಮಹತ್ವದ ಹೆಜ್ಜೆಯಾಗಿದ್ದು, ಇದು ಕೇವಲ ಹಣದ ನೆರವಲ್ಲ, ಗೌರವ ಮತ್ತು ಆತ್ಮವಿಶ್ವಾಸವನ್ನು ಒದಗಿಸುವ ಕಾರ್ಯಕ್ರಮವಾಗಿದೆ. ಗೃಹಿಣಿಯ ಶ್ರಮವನ್ನು ಗುರುತಿಸುವ ಈ ಯೋಜನೆ, ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆಗೆ ಕಾರಣವಾಗುತ್ತಿದೆ. ಅರ್ಹ ಫಲಾಬುಭವಿಗಳಿಗೆ ಯೋಜನೆಯ ಸೌಲಭ್ಯ ನಿರ್ದಿಷ್ಟ ಸಮಯದಲ್ಲಿ ತಲುಪುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

**– ಬಿ.ಬಿ. ಅಸೂಟಿ.**
ಅಧ್ಯಕ್ಷರು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಗದಗ ಜಿಲ್ಲೆ.

# ಗುರುಬಸವ ಸಿಬಿಎಸ್‌ಇ ಶಾಲೆಯ ಫಲಿತಾಂಶ ಶೇ. 100





**■ ವಿಜಯಸಾಕ್ಷಿ ಸುದ್ದಿ, ಗದಗ**

ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಗುರುಬಸವ ಸಿ.ಬಿ.ಎಸ್.ಇ ಶಾಲೆಯ 10ನೇ ತರಗತಿ ಫಲಿತಾಂಶ ಶೇ.100ರಷ್ಟಾಗಿದೆ.

ಪರೀಕ್ಷೆ ಬರೆದ 90 ವಿದ್ಯಾರ್ಥಿಗಳಲ್ಲಿ 55 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 20 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, 15 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ. ಸಾನಿಕಾ ಸುನೀಲ ದಿವಾಕರ (ಶೇ. 91.5) ಪ್ರಥಮ, ಆದಿತ್ಯ ಪ್ರವೀಣಕುಮಾರ ಬೇವಿನಮರದ (ಶೇ 90.17) ದ್ವಿತೀಯ, ವಿನಯ ಕೊಟ್ರಪ್ಪ ಉಪ್ಪಿನ (ಶೇ. 88.67) ತೃತೀಯ ಸ್ಥಾನ ಪಡೆದಿದ್ದಾರೆ.

ಸಾಧಕ ವಿದ್ಯಾರ್ಥಿಗಳನ್ನು ತೋಂಟದಾರ್ಯ ಮಠದ ಪೀಠಾಧಿಪತಿ ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ, ಆಡಳಿತಾಧಿಕಾರಿ ಪ್ರಾ. ಶಿವಾನಂದ ಪಟ್ಟಣಶೆಟ್ಟಿ, ಉದ್ದಿಮೆದಾರ ಈಶ್ವರಪ್ಪ ಬೇವಿನಮರದ ಅಭಿನಂದಿಸಿದ್ದಾರೆ.

# ಗಾಜಾದಲ್ಲಿ ಮುಂದುವರೆದ ಇಸ್ರೇಲ್ ದಾಳಿ: 80 ಜನರ ಸಾವು

**■ ವಿಜಯಸಾಕ್ಷಿ ಸುದ್ದಿ, ಇಸ್ರೇಲ್**



ಗಾಜಾದಾದ್ಯಂತ ಇಸ್ರೇಲ್ ನಡೆಸಿದ ವಾಯುದಾಳಿಯಲ್ಲಿ ಕನಿಷ್ಠ 80 ಪ್ಯಾಲೆಸ್ತೀನಿಯನ್ನರು ಸಾವನ್ನಪ್ಪಿ, ಡಜನ್‌ಗಟ್ಟಲೆ ಜನರು ಗಾಯಗೊಂಡಿದ್ದಾರೆ ಎಂದು ಪ್ಯಾಲೆಸ್ತೀನಿಯನ್ ವೈದ್ಯಕೀಯ ಮೂಲಗಳು ತಿಳಿಸಿವೆ.

ಗುರುವಾರ ಪತ್ರಿಕಾ ಹೇಳಿಕೆಯ ಪ್ರಕಾರ, ದಕ್ಷಿಣ ನಗರದ ಮೇಲಿನ ದಾಳಿಯಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ 54 ಜನರು ಸಾವನ್ನಪ್ಪಿದ್ದಾರೆ ಎಂದು ಖಾನ್ ಯೂನಿಸ್‌ನಲ್ಲಿರುವ ನಾಸರ್ ಆಸ್ಪತ್ರೆ ವರದಿ ಮಾಡಿದೆ.

ಗಾಜಾ ಮೂಲದ ಆರೋಗ್ಯ ಅಧಿಕಾರಿಗಳ ಪ್ರಕಾರ, ಈ ಪ್ರದೇಶದಲ್ಲಿ ಕ್ಯಾನ್ಸರ್ ರೋಗಿಗಳಿಗೆ ವೈದ್ಯಕೀಯ ನಂತರದ ಆರೈಕೆಯನ್ನು ಒದಗಿಸುವ ಏಕೈಕ ಆಸ್ಪತ್ರೆಯಾದ ಗಾಜಾ ಯುರೋಪಿಯನ್ ಆಸ್ಪತ್ರೆ ಇತ್ತೀಚಿನ ಇಸ್ರೇಲಿ ದಾಳಿಗಳಿಂದಾಗಿ ಸೇವೆಯಿಂದ ಹೊರಗುಳಿದಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಇಸ್ರೇಲಿ ದಾಳಿಗಳು 'ಒಳಚರಂಡಿ ಮಾರ್ಗಗಳು, ಆಂತರಿಕ ಇಲಾಖೆಗಳಿಗೆ ಹಾನಿ ಮತ್ತು ಆಸ್ಪತ್ರೆಗೆ ಹೋಗುವ ರಸ್ತೆಗಳ ನಾಶದಂತಹ ಮೂಲಸೌಕರ್ಯಗಳಿಗೆ ಗಮನಾರ್ಹ ಹಾನಿಯನ್ನುಂಟುಮಾಡಿದೆ' ಎಂದು ಅಧಿಕಾರಿಗಳು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಈ ಮಧ್ಯೆ, ಗಾಜಾ ನಗರ ಮತ್ತು ಉತ್ತರ ಗಾಜಾದ ಇತರ ಪ್ರದೇಶಗಳಲ್ಲಿ ಇಸ್ರೇಲಿ ವಾಯುದಾಳಿಯಲ್ಲಿ 26 ಜನರು ಸಾವನ್ನಪ್ಪಿದ್ದಾರೆ ಎಂದು ವೈದ್ಯಕೀಯ ಮೂಲಗಳು ಕ್ಸಿನ್ಹುವಾ ಸುದ್ದಿ ಸಂಸ್ಥೆಗೆ ತಿಳಿಸಿವೆ.

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮಂಗಳವಾರ ಎಚ್ಚರಿಕೆ ನೀಡಿದ ನಂತರ ಈ ವಾಯುದಾಳಿಗಳು ನಡೆದಿವೆ. ಮುಂಬರುವ ದಿನಗಳಲ್ಲಿ ಇಸ್ರೇಲ್ ಸೇನೆಯು ಹಮಾಸ್ ಅನ್ನು ಸೋಲಿಸುವ ಪ್ರಯತ್ನಗಳೊಂದಿಗೆ ಮುಂದುವರಿಯಲು 'ಪೂರ್ಣ ಬಲದೊಂದಿಗೆ' ಗಾಜಾವನ್ನು ಪ್ರವೇಶಿಸುತ್ತದೆ.

ಮಾರ್ಚ್ 18 ರಂದು ಇಸ್ರೇಲ್ ಗಾಜಾದಲ್ಲಿ ದೊಡ್ಡ ಪ್ರಮಾಣದ ಮಿಲಿಟರಿ ಕಾರ್ಯಾಚರಣೆಗಳನ್ನು ಪುನರಾರಂಭಿಸಿತು, ಎರಡು ತಿಂಗಳ ಕದನ ವಿರಾಮವನ್ನು ಕೊನೆಗೊಳಿಸಿತು. ಅಂದಿನಿಂದ, 2,876 ಪ್ಯಾಲೆಸ್ತೀನಿಯನ್ನರು ಸಾವನ್ನಪ್ಪಿದ್ದಾರೆ. 7,800 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಗಾಜಾದ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ.

# ಪ್ರಮುಖ ದಿನಪತ್ರಿಕೆ ಮಾಲೀಕರನ್ನು ಬಂಧಿಸಿದ ಜಾರಿ ನಿರ್ದೇಶನಾಲಯ

**■ ವಿಜಯಸಾಕ್ಷಿ ಸುದ್ದಿ, ಗುಜರಾತ್**

ಆರ್ಥಿಕ ವಂಚನೆ ಆರೋಪದ ಮೇಲೆ ಪ್ರಮುಖ ಗುಜರಾತಿ ದಿನಪತ್ರಿಕೆ ಗುಜರಾತ್ ಸಮಾಚಾರ್‌ನ ಮಾಲೀಕರಲ್ಲಿ ಒಬ್ಬರನ್ನು ಜಾರಿ ನಿರ್ದೇಶನಾಲಯ ಗುರುವಾರ ತಡರಾತ್ರಿ ಬಂಧಿಸಿದೆ. ಆರೋಪಗಳ ವಿವರಗಳು ಇನ್ನೂ ಸಂಪೂರ್ಣವಾಗಿ ತಿಳಿದಿಲ್ಲ. ಆದರೆ, ಸರ್ಕಾರವನ್ನು ಟೀಕಿಸಿದ್ದಕ್ಕಾಗಿ ಅವರನ್ನು ಗುರಿಯಾಗಿಸಿಕೊಳ್ಳಲಾಗಿದೆ ಎಂದು ಕುಟುಂಬ ಹೇಳಿಕೊಂಡಿದೆ.




ದಿನಪತ್ರಿಕೆಯ ಮಾಲೀಕರಲ್ಲಿ ಒಬ್ಬರಾದ ಬಾಹುಬಲಿ ಶಾ ಅವರನ್ನು ಶುಕ್ರವಾರ ಇಡಿ ಅಧಿಕಾರಿಗಳು ಬಂಧಿಸಿದ್ದಾರೆ. "ಹೌದು, ಮಾಹಿತಿ ಸರಿಯಾಗಿದೆ. ಬಾಹುಬಲಿಭಾಯ್ ಅವರನ್ನು ಹಳೆಯ ಪ್ರಕರಣದಲ್ಲಿ ಬಂಧಿಸಲಾಗಿದೆ. ಆರೋಪಗಳ ಬಗ್ಗೆ ನಮಗೆ ಇನ್ನೂ ಹೆಚ್ಚಿನ ವಿವರಗಳಿಲ್ಲ.. ನಮ್ಮನ್ನು ಗುರಿಯಾಗಿಸಲಾಗುತ್ತಿದೆ" ಎಂದು ಪತ್ರಿಕೆಯ ವ್ಯವಸ್ಥಾಪಕ ಸಂಪಾದಕ ಶ್ರೇಯಂಶ್ ಶಾ ಡಿಎಚ್‌ಗೆ ತಿಳಿಸಿದ್ದಾರೆ. ಇಡಿಯಿಂದ ಪ್ರತಿಕ್ರಿಯೆ ಪಡೆಯುವ ಪ್ರಯತ್ನಗಳು ಸಹ ಯಾವುದೇ ಫಲ ನೀಡಲಿಲ್ಲ ಎಂದು ಹೇಳಿದ್ದಾರೆ.

ಅತಿದೊಡ್ಡ ಪ್ರಸಾರವಾಗುವ ಸ್ಥಳೀಯ ಪತ್ರಿಕೆಗಳಲ್ಲಿ ಒಂದಾದ ಗುಜರಾತ್ ಸಮಾಚಾರ್ ಅನ್ನು 1932 ರಲ್ಲಿ ಸ್ಥಾಪಿಸಲಾಯಿತು. ಇದನ್ನು ಬಾಹುಬಲಿ ಶಾ ಮತ್ತು ಅವರ ಸಹೋದರ ಶ್ರೇಯಂಶ್ ಶಾ ಜಂಟಿಯಾಗಿ ನಡೆಸುತ್ತಿದ್ದಾರೆ.

"ಆದಾಯ ತೆರಿಗೆ ಇಲಾಖೆ ನಡೆಸಿದ ಕಾರ್ಯಾಚರಣೆಯ ಕೆಲವೇ ಗಂಟೆಗಳಲ್ಲಿ ಇಡಿ ಬಾಹುಬಲಿ ಶಾ ಅವರನ್ನು ಬಂಧಿಸಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ಸರ್ಕಾರದ ವಿರುದ್ಧ ಪತ್ರಿಕೆಯಲ್ಲಿ ಬಂದಿರುವ ಟೀಕಾತ್ಮಕ ಬರಹವೇ ಅವರ ಬಂಧನಕ್ಕೆ ನಿಜವಾದ ಕಾರಣ" ಎಂದು ಗುಜರಾತ್ ಕಾಂಗ್ರೆಸ್ ಅಧ್ಯಕ್ಷ ಮತ್ತು ರಾಜ್ಯಸಭಾ ಸಂಸದ ಶಕ್ತಿಸಿನ್ಹ ಗೋಹಿಲ್ ಹೇಳಿದ್ದಾರೆ.

ಬಾಹುಬಲಿ ಶಾ ಅವರನ್ನು ಬಂಧಿಸಲಾಗಿದೆ ಎಂದು ದೃಢಪಡಿಸಿದ ಶಾ ಕುಟುಂಬದೊಂದಿಗೆ ಮಾತನಾಡಿರುವುದಾಗಿ ಗೋಹಿಲ್ ಡಿಎಚ್‌ಗೆ ತಿಳಿಸಿದ್ದಾರೆ. ಶಾ ಅವರಿಗೆ ಎದೆ ನೋವು ಕಾಣಿಸಿಕೊಂಡಿದ್ದು, ನಂತರ ಅವರನ್ನು ವೈದ್ಯಕೀಯ ಪರೀಕ್ಷೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿಂದ ರಾತ್ರಿ ಬೇರೆ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು.

# ಕರ್ನಲ್ ಸೋಫಿಯಾ ಖುರೇಷಿ ಬಗ್ಗೆ ಸುಳ್ಳು ಪೋಸ್ಟ್: ಎಫ್‌ಐಆರ್ ದಾಖಲು

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಸೇನಾಧಿಕಾರಿ ಸೋಫಿಯಾ ಖುರೇಷಿ ಅವರ ಅತ್ತೆ ಮಾವನ ಮನೆಯ ಮೇಲೆ "ದಾಳಿ" ನಡೆದಿದೆ ಎಂದು ಆರೋಪಿಸಿ ಸಾಮಾಜಿಕ ಮಾಧ್ಯಮದಲ್ಲಿ ನಕಲಿ ಸುದ್ದಿ ಹರಡಿದ ಪೋಸ್ಟ್‌ಗೆ ಸಂಬಂಧಿಸಿದಂತೆ ಗುರುವಾರ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪರೇಷನ್ ಸಿಂಧೂರದ ಬಗ್ಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಸತತವಾಗಿ ಭಾಗವಹಿಸಿದ್ದ ಕರ್ನಲ್ ಸೋಫಿಯಾ ಖುರೇಷಿ ಅವರು ಬೆಳಗಾವಿಯ ಸೊಸೆಯಾಗಿದ್ದು ಅವರ ಪತಿ ಕೂಡಾ ಸೇನೆಯಲ್ಲಿದ್ದಾರೆ. ಕರ್ನಲ್ ಸೋಫಿಯಾ ಖುರೇಷಿ ಬಗ್ಗೆ ಪೊಲೀಸ್ ಅಧಿಕಾರಿಯ ದೂರಿನ ಮೇರೆಗೆ, ಎಕ್ಸ್ ಬಳಕೆದಾರ ಅನಿಸ್ ಉದ್ದೀನ್ ವಿರುದ್ಧ ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್ 353(2) (ಸಾರ್ವಜನಿಕ ಕಿರುಕುಳಕ್ಕೆ ಕಾರಣವಾಗುವ ಹೇಳಿಕೆಗಳು ಮತ್ತು 192 (ಂ) (ಗಲಭೆಯನ್ನು ಉಂಟುಮಾಡುವ ಉದ್ದೇಶದಿಂದ ಉದ್ದೇಶಪೂರ್ವಕವಾಗಿ ಪ್ರಚೋದನೆ ನೀಡುವುದು) ಅಡಿಯಲ್ಲಿ ಸೆನ್ (CEN) ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಆಪಾದಿತ ನಕಲಿ ಪೋಸ್ಟ್ ಅನ್ನು ಮರುಟ್ವೀಟ್ ಮಾಡಿದ್ದಕ್ಕಾಗಿ ಇತರ ಇಬ್ಬರು ಎಕ್ಸ್ ಬಳಕೆದಾರರಾದ ಖುಬಾನಿ ಮತ್ತು ಡ್ರುಮಿ ಎಂಬವರ ಹೆಸರನ್ನು ಎಫ್‌ಐಆರ್‌ನಲ್ಲಿ ಹೆಸರಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ಖಾತೆದಾರರ ಗುರುತನ್ನು ಇನ್ನಷ್ಟೆ ಪರಿಶೀಲಿಸಬೇಕಾಗಿದೆ. ಬೆಳಗಾವಿ ಪೊಲೀಸ್ ವರಿಷ್ಠಾಧಿಕಾರಿ ಭೀಮಶಂಕರ್ ಗುಳೇದ್ ಬುಧವಾರ ಮಾತನಾಡಿ, "ಅಂತಹ ಯಾವುದೇ ಘಟನೆ ನಡೆದಿಲ್ಲ" ಎಂದು ದೃಢಪಡಿಸಿದ್ದು, ಈ ಪೋಸ್ಟ್ ಸುಳ್ಳು ಎಂದು ಸ್ಪಷ್ಟಪಡಿಸಿದ್ದಾರೆ.



ಇದೀಗ ಆಪಾದಿತ ಪೋಸ್ಟ್ ಅನ್ನು ಅಳಿಸಲಾಗಿದ್ದು, ಅದಾಗ್ಯೂ, ಈ ಪೋಸ್ಟ್ ಭಾರತದ ಹೊರಗಿನಿಂದ ಬಂದಿದೆ ಎಂದು ನಂಬಲಾಗಿದ್ದು, ಪ್ರಾಥಮಿಕ ತನಿಖೆಯಲ್ಲಿ ಪ್ರಕರಣ ಪ್ರಮುಖ ಆರೋಪಿ ಉದ್ದೀನ್ ಕೆನಡಾದ ಬ್ರಿಟಿಷ್ ಕೊಲಂಬಿಯಾ ನಿವಾಸಿ ಎಂದು ಸೂಚಿಸಿದೆ ಎಂದು ಡೆಕ್ಕನ್ ಹೆರಾಲ್ಡ್ ವರದಿ ಹೇಳಿದೆ.

ಈ ಮೊದಲು ರಾಜ್ಯದ ಗೃಹ ಸಚಿವ ಜಿ ಪರಮೇಶ್ವರ ಅವರು, ಕಾನೂನು ಪ್ರಕಾರ ಕ್ರಮ ಕೈಗೊಳ್ಳುವಂತೆ ಪೊಲೀಸ್ ವರಿಷ್ಠಾಧಿಕಾರಿಗೆ (ಎಸ್‌ಪಿ) ಸೂಚನೆ ನೀಡಲಾಗಿದೆ ಎಂದು ಹೇಳಿದ್ದರು.

# ಮನವಿ ತಿರಸ್ಕರಿಸಿದ ಸಿಬಿಐ ನ್ಯಾಯಾಲಯ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಶಿಕ್ಷೆಗೊಳಗಾದ ಕರ್ನಾಟಕದ ಮಾಜಿ ಸಚಿವ ಮತ್ತು ಬಿಜೆಪಿ ನಾಯಕ ಗಾಲಿ ಜನಾರ್ದನ ರೆಡ್ಡಿ ಅವರು ತಮ್ಮ ಶಿಕ್ಷೆಯ ಅವಧಿಯಲ್ಲಿ ವಿಶೇಷ ವರ್ಗದ ಕೈದಿಯಾಗಿ ಪರಿಗಣಿಸಬೇಕೆಂದು ಸಲ್ಲಿಸಿದ್ದ ಅರ್ಜಿಯನ್ನು ಹೈದರಾಬಾದ್‌ನ ವಿಶೇಷ ಸಿಬಿಐ ನ್ಯಾಯಾಲಯ ತಿರಸ್ಕರಿಸಿದೆ.

ಪ್ರಸ್ತುತ ಚಂಚಲಗುಡ ಜೈಲಿನಲ್ಲಿ ಏಳು ವರ್ಷಗಳ ಜೈಲು ಶಿಕ್ಷೆಯನ್ನು ಅನುಭವಿಸುತ್ತಿರುವ ರೆಡ್ಡಿ, ವಿಶೇಷ ಕೈದಿ ವರ್ಗದ ಅಡಿಯಲ್ಲಿ ವಿಶೇಷ ಸೌಲಭ್ಯಗಳಿಗಾಗಿ ನಿರ್ದೇಶನಗಳನ್ನು ನೀಡಬೇಕೆಂದು ನ್ಯಾಯಾಲಯವನ್ನು ಕೋರಿದ್ದರು.



ಆದರೆ, ಸಿಬಿಐ ನ್ಯಾಯಾಲಯವು ಗುರುವಾರ ಅವರ ಅರ್ಜಿಯನ್ನು ವಜಾಗೊಳಿಸಿತು. ಪ್ರಕರಣದಲ್ಲಿ ಈಗಾಗಲೇ ನೀಡಲಾದ ತೀರ್ಪು, ಅಂತಹ ಪರಿಗಣನೆಗೆ ಅರ್ಹವಾದ ಯಾವುದೇ ವಿಷಯಗಳು ನ್ಯಾಯಾಲಯದ ಮುಂದೆ ಬಾಕಿ ಉಳಿದಿಲ್ಲವಾದ್ದರಿಂದ, ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ ಎಂದು ಹೇಳಿದೆ. ಈ ತಿಂಗಳ ಆರಂಭದಲ್ಲಿ ಆಂಧ್ರಪ್ರದೇಶ ಮತ್ತು ಕರ್ನಾಟಕದಾದ್ಯಂತ ದೊಡ್ಡ ಪ್ರಮಾಣದ ಅನಧಿಕೃತ ಕಬ್ಬಿಣದ ಅದಿರು ಗಣಿಗಾರಿಕೆಯನ್ನು ಒಳಗೊಂಡ ಹೈಪ್ರೊಫೈಲ್ ಓಬಳಾಪುರಂ ಮೈನಿಂಗ್ ಕಂಪನಿ (ಒಎಂಸಿ) ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ರೆಡ್ಡಿ ಮತ್ತು ಇತರ ಮೂವರನ್ನು ದೋಷಿ ಎಂದು ಘೋಷಿಸಲಾಯಿತು. ಇದು ಸರ್ಕಾರದ ಬೊಕ್ಕಸಕ್ಕೆ 884 ಕೋಟಿ ರೂ.ಗಳ ನಷ್ಟವನ್ನುಂಟುಮಾಡಿತು.

14 ವರ್ಷಗಳ ಕಾಲ ನಡೆದ ಈ ಪ್ರಕರಣದಲ್ಲಿ ಸಾವಿರಾರು ದಾಖಲೆಗಳು ಮತ್ತು ನೂರಾರು ಸಾಕ್ಷಿಗಳ ಪರಿಶೀಲನೆ ನಡೆದಿದ್ದು, ರೆಡ್ಡಿ ಮತ್ತು ಅವರ ಸಹ-ಆರೋಪಿಗಳಿಗೆ ಏಳು ವರ್ಷಗಳ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲಾಯಿತು.

## 'ಶಾಲಾ-ಕಾಲೇಜಿಗೊಂದು ಶರಣತತ್ವ ಚಿಂತನೆ' ಕಾರ್ಯಕ್ರಮದಲ್ಲಿ ಅರಳಿ ನಾಗರಾಜ

# ಸಮಾಜಮುಖಿ ಕಾರ್ಯಗಳನ್ನು ಮಾಡಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮಾನವ ಸಮಾಜದಿಂದ ಎಲ್ಲವನ್ನೂ ಪಡೆದಿದ್ದಾನೆ. ಕೊನೆಯಲ್ಲಿ ಅದರ ಋಣ ತೀರಿಸಿದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ. ವ್ಯಕ್ತಿ ಉದ್ಧಾರವಾದರೆ, ದೇಶ ಉದ್ಧಾರವಾಗುತ್ತದೆ. ವಿದ್ಯಾರ್ಥಿಗಳ ಗುರಿ ಕೇವಲ ಸಿಲಬಸ್ ಒಂದೇ ಓದುವುದಲ್ಲ ಅದರಾಚೆಗೆ ತುಂಬ ಸಂಗತಿಗಳಿದ್ದು, ಸಾಧ್ಯವಾದುದನ್ನು ಓದಿ ಎಂದು ನಿವೃತ್ತ ನ್ಯಾಯಮೂರ್ತಿ ಅರಳಿ ನಾಗರಾಜ ನುಡಿದರು.



ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಪಿ. ಗೌಳಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಓದುವ ಅಭಿರುಚಿ ಎಂದಿಗೂ ಬತ್ತಬಾರದು. ಓದು ನಿತ್ಯದ ಕಾಯಕವಾಗಬೇಕು. ಓದಿನಿಂದ ನಮ್ಮ ಬಾಳಬುತ್ತಿಗೆ ದಾರಿಯಾದರೆ, ಶರಣ ತತ್ವ ಪಾಲನೆಯಿಂದ ಜೀವನ ಸಾರ್ಥಕವಾಗುತ್ತದೆ. ನಿಜವಾಗಿ ತಮ್ಮ ಜೀವನದಲ್ಲಿ ಶರಣ ತತ್ವಗಳನ್ನು ಅಳವಡಿಸಿಕೊಂಡು ಬಾಳುತ್ತಿರುವ ಅರಳಿ ನಾಗರಾಜರ ಜೀವನ ವಿದ್ಯಾರ್ಥಿಗಳಿಗೆ ಆದರ್ಶಪ್ರಾಯವಾಗಿದೆ ಎಂದರು.

ನಗರದ ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ 'ಶಾಲಾ-ಕಾಲೇಜಿಗೊಂದು ಶರಣತತ್ವ ಚಿಂತನೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರ ಪ್ರಾಸ್ತಾವಿಕ ನುಡಿಗಳನ್ನಾಡಿ, ಶರಣ ತತ್ವಗಳು ಇಂದಿನ ವಿದ್ಯಾರ್ಥಿಗಳಿಗೆ ತಲುಪಬೇಕು. ಇವುಗಳನ್ನು ಜೀವನದಲ್ಲಿ ಅಳವಡಿಕೊಂಡು ಉತ್ತಮ ಸಮಾಜ ನಿರ್ಮಾಣದಲ್ಲಿ ಕೈಜೋಡಿಸಬೇಕು. ಮಕ್ಕಳು ಶರಣಮಾರ್ಗಿಗಳಾಗಬೇಕೆಂಬ ಉದ್ದೇಶದಿಂದ ಶರಣ ಸಾಹಿತ್ಯ ಪರಿಷತ್ತು ಈ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ನುಡಿದರು.

ವೇದಿಕೆಯ ಮೇಲೆ ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಕಾಶ ಅಸುಂಡಿ, ಗದಗ ತಾಲೂಕಾ ಕದಳಿ ವೇದಿಕೆಯ ಅಧ್ಯಕ್ಷರಾದ ಸುಲೋಚನಾ ಐಹೊಳಿ, ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕೋಶಾಧ್ಯಕ್ಷ ಡಿ.ಎಸ್. ಬಾಪುರಿ, ಜಿಲ್ಲಾ ಕಾರ್ಯದರ್ಶಿ ಬೂದಪ್ಪ ಅಂಗಡಿ, ಡಾ. ಪ್ರಕಾಶ ಹೊಸಮನಿ, ಪಾರ್ವತಿ ಬಳಿಗೇರ, ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆಯು ಪದಾಧಿಕಾರಿಗಳು, ಮಹಾವಿದ್ಯಾಲಯದ ಬೋಧಕರು, ಪ್ರಶಿಕ್ಷಣಾರ್ಥಿಗಳು ಬೋಧಕೇತರ ವರ್ಗದವರು ಉಪಸ್ಥಿತರಿದ್ದರು.

ಪೃಥ್ವಿ ಸ್ವಾಗತಿದರು. ಕಾವೇರಿ ಹೊಂಬಳ ನಿರೂಪಿಸಿದರು. ಸುಧಾ ಹುಚ್ಚಣ್ಣವರ ವಂದಿಸಿದರು.

# ಕಚೇರಿ ಸಿಬ್ಬಂದಿಗಳಿಗೆ ಖಡಕ್ ಎಚ್ಚರಿಕೆ

▶▶ ಮೊದಲನೇ ಪುಟದಿಂದ

ಭೂಮಿ ಕೇಂದ್ರದಲ್ಲಿ ಖಾತೆ ಬದಲಾವಣೆ ಸಮಯದಲ್ಲಿ ಕಡ್ಡಾಯವಾಗಿ ಜೆ-ಫಾರ್ಮ್‌ಗೆ ಆಕ್ಷೇಪಣೆಗಳೇನಾದರೂ ಇದ್ದರೆ ಅದಕ್ಕೆ ಸಂಬಂಧಿಸಿದವರಿಗೆ ನೋಟೀಸ್ ಜಾರಿ ಮಾಡುವುದು ನಿಯಮ. ಆದರೆ ಇಲ್ಲಿ ನೋಟೀಸ್ ಜಾರಿ ಮಾಡದೇ ಇರುವುದು ಕಂಡು ಬಂದಿತು. ಈ ಬಗ್ಗೆಯೂ ಸಹ ಸಂಬಂಧಿಸಿದ ಶಿರಸ್ತೇದಾರ ಮತ್ತು ಸಿಬ್ಬಂದಿಗೆ ಈ ವ್ಯವಸ್ಥೆಯನ್ನು ಸರಿಪಡಿಸಿಕೊಳ್ಳುವಂತೆ ಲೋಕಾಯುಕ್ತ ಅಧಿಕಾರಿಗಳು ಸೂಚನೆ ನೀಡಿದರು. ಗದಗ ಲೋಕಾಯುಕ್ತ ಇನ್ಸಪೆಕ್ಟರ್ ಪರಮೇಶ್ವರ ಕವಟಗಿ, ಉಮೇಶ ಸಂಗನಾಳ, ನೀಲಕಂಠಪ್ಪ ಜವಳಿ, ಹಸನ್ ಡಿ, ಮಂಜುನಾಥ ದಿಗಡೂರ ಉಪಸ್ಥಿತರಿದ್ದರು.



ಗದಗ ಸಮೀಪದ ಹಾತಲಗೇರಿ ಗ್ರಾಮದ ಶ್ರೀ ಬೇವಿನ ಮರದ ಸತ್ಯಮ್ಮ ದೇವಿ ಜಾತ್ರಾ ಮಹೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು. ರಥೋತ್ಸವದಲ್ಲಿ ಭಕ್ತರು ದೀಡನಮಸ್ಕಾರ ಹಾಕಿ ಭಕ್ತಿ ಮೆರೆದರು. ಬೆಳಿಗ್ಗೆ ಸತ್ಯಮ್ಮ ದೇವಿಗೆ ಪಂಚಾಮೃತ ಅಭಿಷೇಕ, ಚಿನ್ನ-ಬೆಳ್ಳಿ ಆಭರಣಗಳಿಂದ ಅಲಂಕಾರ ಮಾಡಿ ಪೂಜೆ ಸಲ್ಲಿಸಲಾಯಿತು.

### ಹೆಸ್ಕಾಂ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸೈಯದ್ ಅಜ್ಜಂಪೀರ್ ಖಾದ್ರಿ ಭರವಸೆ

# ಪವರ್‌ಮೆನ್‌ಗಳು ಹೆಸ್ಕಾಂನ ದೊಡ್ಡ ಶಕ್ತಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿರುವ ಹೆಸ್ಕಾಂ ಉಪವಿಭಾಗವನ್ನು ಮೇಲ್ದರ್ಜೆಗೇರಿಸುವುದು, ಹೊಸ ಕಟ್ಟಡ ಮತ್ತು ಸಿಬ್ಬಂದಿಗಳ ವಸತಿ ಗೃಹ ನಿರ್ಮಾಣದ ಜತೆಗೆ ಟಿಸಿ ಬಫರ್ ಜೋನ್, ಟಿಸಿ ಟೆಸ್ಟ್ ಬ್ರ್ಯಾಂಚ್ ಪ್ರಾರಂಭಿಸುವುದು ಹಾಗೂ ಸಿಬ್ಬಂದಿಗಳ ಕೊರತೆ ನೀಗಿಸುವ ಕುರಿತಾದ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹೆಸ್ಕಾಂ) ಅಧ್ಯಕ್ಷ ಸೈಯದ್ ಅಜ್ಜಂಪೀರ್ ಖಾದ್ರಿ ಭರವಸೆ ನೀಡಿದರು.

ಶುಕ್ರವಾರ ಪಟ್ಟಣದ ಹೆಸ್ಕಾಂ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಮಾತನಾಡಿದ ಅವರು, ಪವರ್‌ಮೆನ್‌ಗಳು ಹೆಸ್ಕಾಂಗೆ ದೊಡ್ಡ ಶಕ್ತಿಯಾಗಿದ್ದಾರೆ. ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯು ಉತ್ತರ ಕರ್ನಾಟಕ ಭಾಗದ ಧಾರವಾಡ, ಹಾವೇರಿ, ಗದಗ, ಉತ್ತರ ಕನ್ನಡ, ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಸೇರಿ ಒಟ್ಟು 7 ಜಿಲ್ಲೆಗಳನ್ನು ಒಳಗೊಂಡಿದೆ. ಗ್ರಾಹಕರಿಗೆ ಉತ್ತಮ ಸೇವೆ ಒದಗಿಸುವ ನಿಟ್ಟಿನಲ್ಲಿ ಅಧಿಕಾರಿ ಮತ್ತು ಸಿಬ್ಬಂದಿ ವರ್ಗ ಪರಸ್ಪರ ಹೊಂದಾಣಿಕೆಯೊಂದಿಗೆ ಕೆಲಸ ಮಾಡಬೇಕು. ರೈತರು, ಸಾರ್ವಜನಿಕರಿಗೆ ಗುಣಮಟ್ಟದ ಹಾಗೂ ಸಮರ್ಪಕ (24*7) ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದರು. ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಗೃಹಜ್ಯೋತಿ ಯೋಜನೆಯು ಬಡವರಿಗೆ ಆಸರೆಯಾಗಿದೆ. ಒಟ್ಟು 33.54 ಲಕ್ಷ ಗ್ರಾಹಕರು ಗೃಹಜ್ಯೋತಿ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಲಕ್ಷ್ಮೇಶ್ವರ ತಾಲೂಕಿನಲ್ಲಿ ಶೇ. 97.5ರಷ್ಟು ಪ್ರಗತಿ ಸಾಧಿಸಲಾಗಿದೆ. ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಮತ್ತು ಸೂರಣಗಿಯಲ್ಲಿನ ಹೆಸ್ಕಾಂ ಘಟಕವನ್ನು ಮೇಲ್ದರ್ಜೆಗೇರಿಸಲಾಗುವುದು. ಪ್ರತಿ ಜಿಲ್ಲೆ, ತಾಲೂಕುಗಳಿಗೆ ಭೇಟಿ ನೀಡಿ, ಸಮಾಲೋಚನೆ ನಡೆಸಲಾಗುವುದು. ವಿದ್ಯುತ್ ಬಿಲ್ ಬಾಕಿ ಇರುವುದು ಗಮನಕ್ಕೆ ಬಂದಿದ್ದು, ತ್ವರಿತಗತಿಯಲ್ಲಿ ವಸೂಲು ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ. ಈ ವೇಳೆ ಸಾರ್ವಜನಿಕರು ಮತ್ತು ಸಿಬ್ಬಂದಿಗಳೊಂದಿಗೆ ಸಮಾಲೋಚಿಸಿ ಅಹವಾಲು ಸ್ವೀಕರಿಸಿ ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು.



ಹೆಸ್ಕಾಂನಲ್ಲಿ ಒಟ್ಟು 62 ಲಕ್ಷ ಗ್ರಾಹಕರಿದ್ದು, ಅದರಲ್ಲಿ 10.49 ಲಕ್ಷ ನೀರಾವರಿ ಪಂಪ್‌ಸೆಟ್‌ಗಳಿವೆ. ಕುಸುಮ್-ಬಿ ಯೋಜನೆಯಡಿ ನೀರಾವರಿ ಪಂಪ್‌ಸೆಟ್‌ಗಳಿಗೆ ಸೌರ ವಿದ್ಯುತ್ ಒದಗಿಸಲಾಗುತ್ತಿದೆ. ಒಟ್ಟು 3,937 ಗ್ರಾಹಕರು ಸೌರ ಮೇಲ್ಛಾವಣಿ ಯೋಜನೆಯಡಿ ಸೌರ ವಿದ್ಯುತ್ ಅಳವಡಿಸಿಕೊಂಡು, 89.93 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದಿಸುತ್ತಿದ್ದಾರೆ. ಈಗ ಪಿಎಮ್-ಸೂರ್ಯ ಘರ್ ಯೋಜನೆ ಜಾರಿಯಲ್ಲಿದ್ದು, ಗ್ರಾಹಕರು ಅದರ ಪ್ರಯೋಜನವನ್ನು ಪಡೆಯಬೇಕು. ರೈತರ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸರಬರಾಜು ಮಾಡುವ ಪರಿವರ್ತಕಗಳು (ಟಿಸಿ) ವಿಫಲವಾಗಿದ್ದಲ್ಲಿ ಅವುಗಳನ್ನು ತ್ವರಿತವಾಗಿ ಬದಲಾಯಿಸಲು ಕ್ರಮ ವಹಿಸಲಾಗುವುದು ಎಂದರು.

ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಶ್ ಆಡೂರ, ಪಂಚ ಗ್ಯಾರಂಟಿ ಯೋಜನೆಯ ತಾಲೂಕಾಧ್ಯಕ್ಷ ನಾಗರಾಜ ಮಡಿವಾಳರ, ಹೆಸ್ಕಾಂ ಎಇಇ ಆಂಜನಪ್ಪ ಬಿ, ಹೆಸ್ಕಾಂ ಎಸ್‌ಓ ಕಿರಣಕುಮಾರ ಘಮ್ಮಾರ, ರಘುಪತಿ ನಾಯ್ಕ್, ಅಂಬರೇಶ ತೆಂಬದಮನಿ, ಸದಾನಂದ ನಂದೆಣ್ಣವರ, ಕಲಂದರ ಸೂರಣಗಿ, ರಾಜೀವ ಕುಂಬಿ, ಎಸ್.ಕೆ. ಹವಾಲ್ದಾರ, ಮಾಂತೇಶ ಗುಡಸಲಮನಿ, ವಾಸೀಂ ಮುಚ್ಚಾಲೆ ಸೇರಿದಂತೆ ಸಾರ್ವಜನಿಕರು, ಸಿಬ್ಬಂದಿಗಳು ಇದ್ದರು.

# ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ, ಕೇಂದ್ರ ಸಂವಹನ ಇಲಾಖೆ, ವಾರ್ತಾ ಮತ್ತು ಪ್ರಸಾರ ಸಚಿವಾಲಯ ಭಾರತ ಸರ್ಕಾರ, ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿ ಹಾಗೂ ಶ್ರೀಯಾ ನರ್ಸಿಂಗ್ ಕಾಲೇಜು ಇವರ ಸಹಯೋಗದೊಂದಿಗೆ, ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಅಂಗವಾಗಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಜನಜಾಗೃತಿ ಜಾಥಾ ಕಾರ್ಯಕ್ರಮವನ್ನು ಶುಕ್ರವಾರ ಬೆಳಿಗ್ಗೆ ಹಮ್ಮಿಕೊಳ್ಳಲಾಯಿತು.




ಜಿಲ್ಲಾಧಿಕಾರಿ ದಿವ್ಯ ಪ್ರಭು ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ, ಡೆಂಗ್ಯೂ ಜ್ವರ ನಿಯಂತ್ರಣದಲ್ಲಿ ಈಡೀಸ್ ಲಾರ್ವಾ ನಿರ್ಮೂಲನೆಯೇ ಅಸ್ತ್ರವಾಗಿದ್ದು, ಈಡೀಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ಪರಿಶೀಲಿಸಿ, ಸ್ವಚ್ಛಗೊಳಿಸಿ ಮುಚ್ಚಿಡುವುದರ ಮೂಲಕ ಈಡೀಸ್ ಉತ್ಪತ್ತಿಯನ್ನು ನಿಯಂತ್ರಿಸಬಹುದಾಗಿದೆ. ಡೆಂಗ್ಯೂ ಜ್ವರ ಹರಡುವ ಮುನ್ನ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಎಂದು ಸಲಹೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಎಸ್.ಎಮ್. ಹೊನಕೇರಿ ಮಾತನಾಡಿ, ಪ್ರಸ್ತುತ ಜಿಲ್ಲೆಯಲ್ಲಿನ ಡೆಂಗ್ಯೂ ಪ್ರಕರಣಗಳ ಸ್ಥಿತಿ-ಗತಿ ಕುರಿತು ವಿವರಿಸಿ, ಪ್ರತಿ ವರ್ಷ ಡೆಂಗ್ಯೂನಿಂದ ಆಗುವ ಅಪಾಯಗಳ ಬಗ್ಗೆ ಜನಜಾಗೃತಿ ಮೂಡಿಸುವ ಉದ್ದೇಶದಿಂದ ಮೇ. 16ರಂದು ರಾಷ್ಟ್ರೀಯ ಡೆಂಗ್ಯೂ ದಿನ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಕಾರ್ಯಕ್ರಮ ಅಧಿಕಾರಿಗಳು, ಇತರರು ಇದ್ದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಆರ್. ಪಾತ್ರೋಟ ಸ್ವಾಗತಿಸಿ ವಂದಿಸಿದರು.

# ಅಂಡರ್-19 ಕ್ರಿಕೆಟ್ ತಂಡಕ್ಕೆ ಆಯ್ಕೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಎಚ್.ಕೆ. ಪಾಟೀಲ್ ಅಸ್ಟ್ರೋ ಟರ್ಫ್ ಮೈದಾನದಲ್ಲಿ ಶುಕ್ರವಾರ ನಡೆದ ಗದಗ ಗ್ರಾಮೀಣ ಕೆ.ಎಸ್.ಸಿ.ಎ. ಅಂಡರ್-19 ಕ್ರಿಕೆಟ್ ತಂಡಕ್ಕೆ ಹಾವೇರಿ ಜಿಲ್ಲೆಯಿಂದ ಏಳು ಆಟಗಾರರು ಆಯ್ಕೆಯಾಗಿದ್ದಾರೆ.

ಹಾವೇರಿಯ ಕ್ರಿಕೆಟ್ ಆಟಗಾರರಾದ ಚಿನ್ಮಯ ಹಿರೇಮಠ, ಮಲಿಕ್ ರೆಹನ್, ಅಕ್ಷಯ ಹಿರೇಮಠ, ಸುಹಾನ ಸನ್ನುಖಾನವರ, ಪ್ರೀತಮ್ ಜಾಡರ, ನವಾಜ್ ನದಾಫ್, ರಾಮೇಶ್ವರ ಪಾಂಡೆ ಅವರುಗಳು ಕೆ.ಎಸ್.ಸಿ.ಎ. ಅಂಡರ್-19 ಕ್ರಿಕೆಟ್ ತಂಡಕ್ಕೆ ಆಯ್ಕೆಯಾದ ಆಟಗಾರರಾಗಿದ್ದು, ಇವರುಗಳಿಗೆ ಹಾವೇರಿ ಎಟುಎಸ್ ಕ್ರಿಕೆಟ್ ಅಕಾಡೆಮಿ ತರಬೇತುದಾರ ಅರುಣ್ ಸದಣ್ಣವರ್ ಮತ್ತು ಆದಿಲ್ ಸನ್ನುಖಾನವರ ತರಬೇತಿ ನೀಡಿದ್ದಾರೆ.

# ಶಸ್ತ್ರಾಸ್ತ್ರಗುಂಪಿನ ಐವರ ಬಂಧನ

**■ ವಿಜಯಸಾಕ್ಷಿ ಸುದ್ದಿ, ಮಣಿಪುರ**

ಮಣಿಪುರದ ಮೂರು ಜಿಲ್ಲೆಗಳಲ್ಲಿ ವಿವಿಧ ನಿಷೇಧಿತ ಸಶಸ್ತ್ರ ಸಂಘಟನೆಗಳಿಗೆ ಸೇರಿದ ಐವರು ಸದಸ್ಯರನ್ನು ಭದ್ರತಾ ಪಡೆಗಳು ಬಂಧಿಸಿವೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ.

ಇಂಫಾಲ್ ಪೂರ್ವ, ಇಂಫಾಲ್ ಪಶ್ಚಿಮ ಮತ್ತು ತೌಬಲ್ ಜಿಲ್ಲೆಗಳಲ್ಲಿ ಗುರುವಾರ ಬಂಧಿಸಲಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇಂಫಾಲ್ ಪೂರ್ವ ಜಿಲ್ಲೆಯ ಆಂಡ್ರೊ ಪಾರ್ಕಿಂಗ್ ಮತ್ತು ಖುರೈ ಕೊನ್ಸಮ್ ಲೈಕೈಯಿಂದ ನಿಷೇಧಿತ ಯುನೈಟೆಡ್ ನ್ಯಾಷನಲ್ ಲಿಬರೇಶನ್ ಫ್ರಂಟ್ (ಕೊಯಿರೆಂಗ್) ನ ಇಬ್ಬರು ಕಾರ್ಯಕರ್ತರನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು. ಒಂದು ಬಂದೂಕು ಮತ್ತು ಮದ್ದುಗುಂಡುಗಳನ್ನು ಅವರ ಬಳಿಯಿಂದ ವಶಪಡಿಸಿಕೊಳ್ಳಲಾಗಿದೆ.

ತೌಬಲ್ ಜಿಲ್ಲೆಯ ಖಂಗಾಬೋಕ್ ಭಾಗ-II ರಿಂದ ನಿಷೇಧಿತ ಕೆಸಿಪಿ (ಪಿಡಬ್ಲ್ಯೂಜಿ)ಯ ಸಕ್ರಿಯ ಕಾರ್ಯಕರ್ತರನ್ನು ಬಂಧಿಸಲಾಗಿದ್ದು, ಅವರು ಸುಲಿಗೆ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದರು ಎಂದು ಅಧಿಕಾರಿ ಹೇಳಿದರು.

ಇಂಫಾಲ್ ಪಶ್ಚಿಮ ಜಿಲ್ಲೆಯ ಖೊಂಗ್ಡಂಪತ್ ಅವಾಂಗ್ ಲೈಕೈನಿಂದ ನಿಷೇಧಿತ ಕಾಂಗ್ಲೇ ಯಾವೋಲ್ ಕನ್ನಾ ಲುಪ್ (ಸೊರೆಪಾ) ನ ಒಬ್ಬ ಸದಸ್ಯನನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು.

### ಆನ್‌ಲೈನ್ ಮೂಲಕ ಮೊಬೈಲ್ ಖರೀದಿಸಿದ ವಿಧ್ಯಾರ್ಥಿಗೆ ಮೋಸ

# ಅಮೆಜಾನ್ ಕಂಪನಿಗೆ ದಂಡ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಹುಬ್ಬಳ್ಳಿಯ ಅಕ್ಷಯ ಪಾರ್ಕ್‌ನ ಪ್ರತೀಕ್ ಗುಡಿಸಾಗರ ವಿದ್ಯಾರ್ಥಿಯಾಗಿದ್ದು, ತನ್ನ ವ್ಯಾಸಂಗಕ್ಕಾಗಿ ಅಮೆಜಾನ್ ಮುಖಾಂತರ ರೆಡ್‌ಮಿ ನೋಟ್-13 ಪ್ರೋ+ ಮೊಬೈಲನ್ನು ರೂ.24,999ಗಳಿಗೆ ಬುಕ್ ಮಾಡಿದ್ದರು. ಎದುರುದಾರರು ಬುಕ್ ಮಾಡಿದ ಮೊಬೈಲ್ ಬದಲಾಗಿ ಬೇರೆ ಇನ್ನೊಬ್ಬರು ಬುಕ್ ಮಾಡಿದ ಕಡಿಮೆ ಮೊತ್ತದ ಸ್ಯಾಮಸಂಗ್ ಗ್ಯಾಲಕ್ಸಿ ಮೊಬೈಲನ್ನು ಕಳುಹಿಸಿದ್ದರು. ಇದರಿಂದ ತನಗೆ ಸೇವಾ ನ್ಯೂನ್ಯತೆ ಆಗಿದ್ದು, ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರರು ದಿ:22/11/2024ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ ಭೂತೆ ಹಾಗೂ ಸದಸ್ಯೆ ವಿಶಾಲಾಕ್ಷಿ ಬೋಳಶೆಟ್ಟಿ, ದೂರುದಾರರ ದಾಖಲೆಗಳನ್ನು ಪರಿಶೀಲಿಸಿ, ರೂ.24,999 ಪಾವತಿಸಿ ಆನ್‌ಲೈನ್ ಮುಖಾಂತರ ಎದುರುದಾರರ ಬಳಿ ರೆಡ್‌ಮಿ ನೋಟ್ ಮೊಬೈಲ್ ಖರೀದಿಸಿರುವುದು ಆಯೋಗದ ಗಮನಕ್ಕೆ ಕಂಡುಬಂದಿರುತ್ತದೆ. ಎದುರುದಾರರು ಡೆಲಿವರಿ ಕೊಟ್ಟ ಮೊಬೈಲ್ ಬೇರೆ ಇರುವುದನ್ನು ಗಮನಿಸಿದ ಆಯೋಗ ಎದುರುದಾರರು ಸೇವಾ ನ್ಯೂನ್ಯತೆ ಎಸಗಿರುವರೆಂದು ಅಭಿಪ್ರಾಯಪಟ್ಟು ಆದೇಶವಾದ 15 ದಿನಗಳ ಒಳಗಾಗಿ ದೂರುದಾರರು ಬುಕ್ ಮಾಡಿದ ಮೊಬೈಲನ್ನು ಕೊಡುವಂತೆ ಹಾಗೂ ತಪ್ಪಿದ್ದಲ್ಲಿ ಅದರ ಹಣ ರೂ.24,999ಗಳನ್ನು ಶೇ. 10ರಂತೆ ಬಡ್ಡಿ ಲೆಕ್ಕ ಹಾಕಿ ದೂರುದಾರರಿಗೆ ಕೊಡುವಂತೆ ಎದುರುದಾರರಿಗೆ ಆದೇಶಿಸಿದೆ.

ದೂರುದಾರರಿಗೆ ಆಗಿರುವ ಅನಾನುಕೂಲ ಮತ್ತು ಮಾನಸಿಕ ಹಿಂಸೆಗೆ ರೂ.50,000 ಪರಿಹಾರ ಹಾಗೂ ರೂ.10,000 ಪ್ರಕರಣದ ಖರ್ಚು-ವೆಚ್ಚ ಕೊಡುವಂತೆ ಎದುರುದಾರರಾದ ಅಮೆಜಾನ್ ಪ್ರೈ.ಲಿ.ಗೆ ಆಯೋಗ ಆದೇಶಿಸಿದೆ.

# ಎರಡು ವಾರಗಳಲ್ಲಿ ಕ್ಷಮೆ ಕೇಳಿ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮಾಜಿ ರಾಜತಾಂತ್ರಿಕ ಅಧಿಕಾರಿ ಲಕ್ಷ್ಮಿ ಪುರಿ ಅವರು ಸಲ್ಲಿಸಿದ್ದ ಮಾನನಷ್ಟ ಮೊಕದ್ದಮೆಯಲ್ಲಿ, ಎರಡು ವಾರಗಳಲ್ಲಿ ಸಾರ್ವಜನಿಕವಾಗಿ ಕ್ಷಮೆಯಾಚಿಸುವಂತೆ ದೆಹಲಿ ಹೈಕೋರ್ಟ್ ತೃಣಮೂಲ ಕಾಂಗ್ರೆಸ್ ಸಂಸದ ಸಾಕೇತ್ ಗೋಖಲೆ ಅವರಿಗೆ ಆದೇಶಿಸಿದೆ.

ಜುಲೈ 2024 ರಲ್ಲಿ, ಗೋಖಲೆ ಅವರು ಪುರಿ ಅವರ ಬಗ್ಗೆ "ತಪ್ಪು ಮತ್ತು ಸುಳ್ಳು" ಆರೋಪಗಳನ್ನು ಮಾಡಿದ್ದಾರೆ ಎಂದು ಹೈಕೋರ್ಟ್ ತೀರ್ಪು ನೀಡಿದೆ. ಪುರಿ ಅವರು ಸ್ವಿಟ್ಜರ್ಲೆಂಡ್‌ನಲ್ಲಿ ಅಕ್ರಮ ಆಸ್ತಿಯನ್ನು ಖರೀದಿಸಿದ್ದಾರೆ ಎಂಬ ಗೋಖಲೆ ಅವರ ಹೇಳಿಕೆಗಳು ಸೇರಿವೆ.

ಗೋಖಲೆ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳ ಬಗ್ಗೆ ಅಸಮಾಧನ ವ್ಯಕ್ತಪಡಿಸಿದ್ದ ಪುರಿ, ಅವರ ಹೇಳಿಕೆ "ಮಾನನಷ್ಟಕರ, ದುರುದ್ದೇಶಪೂರಿತ ಮತ್ತು ಸುಳ್ಳು ಮಾಹಿತಿಯನ್ನು ಆಧರಿಸಿವೆ" ಎಂದು ಆರೋಪಿಸಿ ಅವರ ವಿರುದ್ಧ ಮೊಕದ್ದಮೆ ಹೂಡಿದ್ದರು.

## ನಿಧನ

### ಹುಚ್ಚಪ್ಪ ನವಲಗುಂದ



ರೋಣ: ಇಲ್ಲಿನ ಪುರಸಭೆಯ ಮಾಜಿ ಅಧ್ಯಕ್ಷರಾದ ಹುಚ್ಚಪ್ಪ ಬ ನವಲಗುಂದ (84) ಶುಕ್ರವಾರ ಬೆಳಗಿನ ಜಾವ ಪಟ್ಟಣದ ಸ್ವಗೃಹದಲ್ಲಿ ನಿಧನರಾದರು.

**ಸಂತಾಪ:** ಶಾಸಕ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ಮಾಜಿ ಸಂಸದ ಆರ್.ಎಸ್. ಪಾಟೀಲ, ಐ.ಎಸ್. ಪಾಟೀಲ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಪುರಸಭೆ ಅಧ್ಯಕ್ಷೆ ಗೀತಾ ಮಾಡಲಗೇರಿ, ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ಮುತ್ತಣ್ಣ ಸಂಗಳದ, ಯೂಸುಫ್ ಇಟಗಿ, ಬಾವಾಸಾಬ ಬೆಟಗೇರಿ, ಶಫೀಕ ಮೂಗನೂರ, ವಿ.ಬಿ. ಸೋಮನಕಟ್ಟಿಮಠ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

### ಮಾನವ ನಿರ್ಮಿತ ವಿಪತ್ತುಗಳಿಂದ ಜಿಲ್ಲೆಯ ರಕ್ಷಣೆಗೆ ಅಗತ್ಯ ಸಿದ್ಧತೆ: ಜಿಲ್ಲಾಧಿಕಾರಿ ದಿವ್ಯ ಪ್ರಭು

# 'ಆಪರೇಶನ್ ಅಭ್ಯಾಸ್' ಅಣಕು ಪ್ರದರ್ಶನ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲೆಯಲ್ಲಿ 20ಕ್ಕೂ ಹೆಚ್ಚು ಪ್ರಮುಖ ಸ್ಥಳಗಳನ್ನು ಭದ್ರತೆಯ ದೃಷ್ಟಿಯಿಂದ ಗುರುತಿಸಲಾಗಿದೆ. ಜಿಲ್ಲೆಯಲ್ಲಿ ಬಾಹ್ಯ ದಾಳಿ ಹಾಗೂ ಮಾನವ ನಿರ್ಮಿತ ವಿಪತ್ತುಗಳಿಂದ ಜಿಲ್ಲೆಯ ರಕ್ಷಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಜಿಲ್ಲಾಡಳಿತ, ಮೆ॥ ಹೆಚ್.ಪಿ.ಸಿ.ಎಲ್., ಎಲ್.ಪಿ.ಜಿ ಕಂಪನಿ ಸಹಯೋಗದಲ್ಲಿ ಸಾರ್ವಜನಿಕರ ತಿಳುವಳಿಕೆಗಾಗಿ 'ಆಪರೇಶನ್ ಅಭ್ಯಾಸ್' ಅಣಕು ಪ್ರದರ್ಶನ ಕಾರ್ಯಕ್ರಮದ ನೇತೃತ್ವ ವಹಿಸಿ, ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು.

ಜಿಲ್ಲೆಯಲ್ಲಿ ಮುಖ್ಯ ಸ್ಥಳಗಳಾದ ರೈಲು ನಿಲ್ದಾಣ, ಬಸ್‌ನಿಲ್ದಾಣ, ವಿಮಾನ ನಿಲ್ದಾಣ ಹಾಗೂ ಪೆಟ್ರೋಲಿಯಂ ದಾಸ್ತಾನು ಸಂಗ್ರಹಾರ (ಡಿಪೊ)ಗಳು ಇವೆ. ಯಾವುದೇ ಅವಘಡ ಸಂಭವಿಸಿದಾಗ ತುರ್ತು ಚಿಕಿತ್ಸೆಗೆ 7 ಸರಕಾರಿ, 31 ಖಾಸಗಿ ಆಸ್ಪತ್ರೆಗಳಿದ್ದು, ಒಟ್ಟು 2841 ಬೆಡ್‌ಗಳ ಸೌಲಭ್ಯವಿದೆ. 1740 ಆಕ್ಸಿಜನ್ ಬೆಡ್, 399 ಐಸಿಯು ಬೆಡ್ ಹಾಗೂ 207 ವೆಂಟಿಲೇಟರ್ ಸೌಲಭ್ಯದ ಬೆಡ್‌ಗಳಿವೆ ಎಂದು ತಿಳಿಸಿದರು.

ತುರ್ತು ಸಂದರ್ಭಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಹಾಯವಾಣಿ: 0836-2445308, 2441077, ಪೊಲೀಸ್ ಆಯುಕ್ತ ಕಚೇರಿ ಸಹಾಯವಾಣಿ ಸಂಖ್ಯೆ: 0836-2233555 ಹಾಗೂ ಧಾರವಾಡ ಪೊಲೀಸ್ ಅಧೀಕ್ಷಕರ ಕಚೇರಿ ಸಹಾಯವಾಣಿ ಸಂಖ್ಯೆ: 0836-2233201ಗೆ ಕರೆ ಮಾಡಬಹುದು ಎಂದು ತಿಳಿಸಿದರು.

ದೇಶದಲ್ಲಿ ತುರ್ತು ಪರಿಸ್ಥಿತಿಯ ಬಂದಾಗ ಸಾರ್ವಜನಿಕರಿಗೆ ಮತ್ತು ಪ್ರಾಣಿ ಪಕ್ಷಿಗಳಿಗೆ ಹಾನಿಯಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕೆಂದು ಅಣಕು ಪ್ರದರ್ಶನವನ್ನು ಕೈಗೊಂಡಿದ್ದು, ಅದರಲ್ಲಿ ಅನಿಲ ಸ್ಫೋಟವಾದಾಗ ಸಿಬ್ಬಂದಿಯವರು ಕಾರ್ಯಾಚರಣೆ ಮಾಡುವುದನ್ನು ಮತ್ತು ಅಗ್ನಿಶಾಮಕದಳದವರು ಅನಿಲ ಸೋರಿಕೆಯಾದಾಗ ತಮ್ಮ ಕೆಲಸವನ್ನು ಕಾರ್ಯರೂಪಕ್ಕೆ ತರುವುದನ್ನು ಪ್ರದರ್ಶನದಲ್ಲಿ ತೋರಿಸಿದರು.




ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ ಮಾತನಾಡಿ, ಹುಬ್ಬಳ್ಳಿ ಧಾರವಾಡ ಭಾಗಗಳಲ್ಲಿ 1947ರಿಂದ ಹಿಡಿದು ಇಲ್ಲಿಯವರೆಗೆ ಯಾವುದೇ ರೀತಿಯ ಘಟನೆಗಳು ನಡೆದಿಲ್ಲ. ಆದರೆ ಮುಂದೆ ಸಂಭವಿಸಿದರೆ ನಾವು ಯಾವ ರೀತಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಸೂಚನೆ ನೀಡಿದ್ದರಿಂದ

ಪೊಲೀಸ್ ಇಲಾಖೆಯಲ್ಲಿ ಹೋಂ ಗಾರ್ಡ್, ನಾಗರಿಕ ರಕ್ಷಣಾ ಘಟಕ ಮತ್ತು ಅಗ್ನಿಶಾಮಕದಳ ಹೇಗೆ ಸಾರ್ವಜನಿಕರನ್ನು ಮತ್ತು ಪ್ರಾಣಿ, ಪಕ್ಷಿಗಳನ್ನು ರಕ್ಷಿಸುತ್ತಾರೆ ಎಂಬುದನ್ನು ವೀಕ್ಷಿಸಿ, ಈ ಸಂದರ್ಭದಲ್ಲಿ ಒಂದು ಕಿಲೋಮೀಟರ್ ವ್ಯಾಪ್ತಿಯಲ್ಲಿ ಅನಿಲ ಸೋರಿಕೆ ಅನಾಹುತ ಘಟಿಸಿದಾಗ ಜನಸಾಮಾನ್ಯರನ್ನು ಹೇಗೆ ರಕ್ಷಿಸಬೇಕೆಂದು ಅಣಕು ಪ್ರದರ್ಶನದ ಮೂಲಕ ವೀಕ್ಷಿಸಲಾಯಿತು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ್ ಎಂ.ಬ್ಯಾಕೋಡ ಮಾತನಾಡಿ, ಬೇಲೂರು ಕೈಗಾರಿಕಾ ಪ್ರದೇಶದ ಹಿಂದೂಸ್ಥಾನ ಪೆಟ್ರೋಲಿಯಮ್ ಕಾರ್ಪೋರೇಶನ್ ಲಿಮಿಟೆಡ್ ಆವರಣದಲ್ಲಿ ಅಣುಕು ಪ್ರದರ್ಶನವನ್ನು ಮಾಡಿದ್ದೇವೆ. ಕರ್ನಾಟಕ ಸರ್ಕಾರದ ಸೂಚನೆಯಂತೆ ಪೊಲೀಸ್ ಇಲಾಖೆಯವರು, ಬೇಲೂರು ಕೈಗಾರಿಕಾ ಸಂಸ್ಥೆಯವರು, ಮತ್ತು ಬೇರೆ ಬೇರೆ ಕಾರ್ಖಾನೆಯವರು ನಮ್ಮ ಜೊತೆ ಕೈಜೋಡಿಸಿದ್ದಾರೆ ಎಂದು ಹೇಳಿದರು.

ರಕ್ಷಣಾ ಕಾರ್ಯಾಚರಣೆಯಲ್ಲಿ ಕಂದಾರ ಪೊಲೀಸ್, ಅಗ್ನಿಶಾಮಕ ದಳ, ಕೈಗಾರಿಕಾ ಭದ್ರತಾ ಪಡೆ, ಆರೋಗ್ಯ, ಪಶುವಿದ್ಯಕೀಯ, ಹೆಸ್ಕಾಂ ಸೇರಿದಂತೆ ವಿವಿಧ ಇಲಾಖೆಯವರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಉಪ ಪೊಲೀಸ್ ಆಯುಕ್ತ ಮಾನಿಂಗ ನಂದಗಾವಿ, ಎಎಸ್‌ಪಿ ನಾರಾಯಣ ಬರಮಣಿ, ಖಾರ್ಕಾನೆ ಮತ್ತು ಬೈಲರ್ ಇಲಾಖೆ ಜಂಟಿ ನಿರ್ದೇಶಕ ರವಿಂದ್ರ ರಾಠೋಡ, ಉಪನಿರ್ದೇಶಕ ವೆಂಕಟೇಶ ರಾಠೋಡ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಪಶುವೈದ್ಯಕೀಯ ಇಲಾಖೆಯ ಉಪನಿರ್ದೇಶಕ ರವಿ ಸಾಲಿಗೌಡರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಎಸ್.ಎಮ್. ಹೊನಕೇರಿ, ಧಾರವಾಡ ತಹಸೀಲ್ದಾರ ಡಾ. ಡಿ.ಎಚ್. ಹೂಗಾರ, ಎಚ್.ಪಿ.ಸಿ.ಎಲ್ ಪ್ಲಾಂಟ್ ಹೆಡ್ ರಾಜಕುಮಾರ, ಕೃಷಿ, ಆರೋಗ್ಯ, ಸಾರಿಗೆ ಇಲಾಖೆ ಅಧಿಕಾರಿಗಳು, ಇತರ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.






ಲಕ್ಷ್ಮೇಶ್ವರ ಹೊರವಲಯದ ಹುಬ್ಬಳ್ಳಿ ರಸ್ತೆಯಲ್ಲಿ ಶುಕ್ರವಾರ ಬೆಳಿಗ್ಗೆ ಸಾರಿಗೆ ಬಸ್-ಲಾರಿ ನಡುವೆ ಡಿಕ್ಕಿ ಸಂಭವಿಸಿ ಅದೃಷ್ಟವಶಾತ್ ಅನಾಹುತ ತಪ್ಪಿದೆ. ಲಕ್ಷ್ಮೇಶ್ವರ ಬಸ್ ನಿಲ್ದಾಣದಿಂದ ಹುಬ್ಬಳ್ಳಿ ಮಾರ್ಗವಾಗಿ ಪೂನಾದತ್ತ ಹೊರಟಿದ್ದ ಹೊಸ ಸಾರಿಗೆ ಬಸ್ಸಿಗೆ ಹುಬ್ಬಳ್ಳಿ ಕಡೆಯಿಂದ ವೇಗವಾಗಿ ಬಂದ ಲಾರಿ ಚಾಲಕನ ನಿಯಂತ್ರಣ ತಪ್ಪಿ ಡಿಕ್ಕಿ ಸಂಭವಿಸಿದ್ದು, ಬಸ್ಸಿನಲ್ಲಿದ್ದ 40ಕ್ಕೂ ಹೆಚ್ಚು ಪ್ರಯಾಣಿಕರು ಚಿಕ್ಕಪುಟ್ಟ ಗಾಯಗಳೊಂದಿಗೆ ಬಚಾವಾಗಿದ್ದಾರೆ. ಸುದ್ದಿ ತಿಳಿದ ತಕ್ಷಣವೇ ಸ್ಥಳಕ್ಕಾಗಮಿಸಿದ ಡಿಪೋ ಮ್ಯಾನೇಜರ್ ಸವಿತಾ ಆದಿ ಮತ್ತು ಪೊಲೀಸರು ದೂರು ದಾಖಲಿಸಿಕೊಂಡಿದ್ದಾರೆ.

# ಐ.ಟಿ.ಐ ಪ್ರವೇಶ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಶಿರಹಟ್ಟಿ ಜಿ: ಗದಗ ಇಲ್ಲಿ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದವರಿಗೆ ಫಿಟ್ಟರ್ ಮತ್ತು ಎಲೆಕ್ಟ್ರಿಷಿಯನ್ ವೃತ್ತಿಗಳಿಗೆ 2025ನೇ ಸಾಲಿಗೆ ಐ.ಟಿ.ಐ ಪ್ರವೇಶಕ್ಕಾಗಿ (ಸಿಟಿಎಸ್ ವಿಭಾಗ) ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ (ಮೆರಿಟ್ ಕಮ್ ರಿಸರ್ವೇಷನ್ ) ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 28 ಕೊನೆಯ ದಿನವಾಗಿದೆ. ಸಂಸ್ಥೆಯು ಕೇಂದ್ರ ಸರ್ಕಾರದ ರಾಷ್ಟ್ರೀಯ ವೃತ್ತಿ ಶಿಕ್ಷಣ ಪರಿಷತ್ (ಎನ್.ಸಿ.ವಿ.ಟಿ) ಗೆ ಸಂಯೋಜನೆಗೊಂಡಿದೆ. ಫಿಟ್ಟರ್ ಮತ್ತು ಎಲೆಕ್ಟ್ರಿಷಿಯನ್ ಎರಡು ವರ್ಷದ ಅವಧಿಯ ವೃತ್ತಿಗಳನ್ನು ಹೊಂದಿರುತ್ತದೆ. ಅರ್ಜಿಗಳನುßWWW.cite.karnataka.gov.in ವೆಬ್ ಸೈಟ್ ಮುಖಾಂತರ ಸಲ್ಲಿಸಬಹುದಾಗಿದೆ.

## ಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗ ಪಾಠಶಾಲೆಗೆ ಸುವರ್ಣ ಸಂಭ್ರಮ

# ಸುವರ್ಣ ಮಹೋತ್ಸವ ಕಾರ್ಯಕ್ರಮ ಮೇ.19ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗ ಪಾಠಶಾಲೆಯು ಯಶಸ್ವಿಯಾಗಿ 50 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ನಗರದ ತೋಂಟದಾರ್ಯ ಸಂಸ್ಥಾನ ಮಠದ ಆವರಣದಲ್ಲಿನ ಡಾ. ತೋಂಟದ ಸಿದ್ಧಲಿಂಗ ಸ್ವಾಮೀಜಿ ಶಿವಾನುಭವ ಮಂಟಪದಲ್ಲಿ ಮೇ. 19ರಂದು ಬೆಳಿಗ್ಗೆ 10.30ಕ್ಕೆ ಸುವರ್ಣ ಮಹೋತ್ಸವ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ತೋಂಟದಾರ್ಯ ಮಠದ ಆಡಳಿತಾಧಿಕಾರಿ ಹಾಗೂ ಯೋಗ ಪಾಠಶಾಲೆ ಸುವರ್ಣ ಮಹೋತ್ಸವ ಸಮಿತಿ ಅಧ್ಯಕ್ಷ ಎಸ್.ಎಸ್. ಪಟ್ಟಣಶೆಟ್ಟಿ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮುಂಡರಗಿ-ಬೈಲೂರು ತೋಂಟದಾರ್ಯ ಶಾಖಾಮಠದ ನಿಜಗುಣಪ್ರಭು ತೋಂಟದಾರ್ಯ ಸ್ವಾಮೀಜಿ, ಶಿರೋಳ ಶಾಖಾಮಠದ ಶಾಂತಲಿಂಗ ಸ್ವಾಮೀಜಿ, ಗುರುಬಸವ ಮಹಾಮನೆಯ ಬಸವಾನಂದ ಸ್ವಾಮೀಜಿ ಹಾಗೂ ಕೋಲ ಶಾಂತೇಶ್ವರ ಮಠದ ಶಾಂತಲಿಂಗ ದೇಶಿಕೇಂದ್ರ ಸ್ವಾಮೀಜಿ ಸಮ್ಮುಖ ವಹಿಸುವರು ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ಘನ ಉಪಸ್ಥಿತಿಯಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಯೋಗ ದೀಪ್ತಿ ಸ್ಮರಣ ಸಂಚಿಕೆ ಬಿಡುಗಡೆಗೊಳಿಸುವರು. ವಿಜಯನಗರ ಸಾಮ್ರಾಜ್ಯದ ಅರವೀಡು ರಾಜವಂಶಸ್ಥ ರಾಜಾ ಶ್ರೀಕೃಷ್ಣದೇವರಾಯರು ದಿ ಯೋಗಾ ಆ್ಯಂಗಲ್-ಪ್ರೊ. ಲಕ್ಷ್ಮಣಕುಮಾರ ವಿ.ಎಸ್ ಗ್ರಂಥ ಲೋಕಾರ್ಪಣೆಗೊಳಿಸುವರು. ಧ್ಯಾನ ಮತ್ತು ಯೋಗದ ಔಷಧೀಯ ಲಾಭಗಳು ವಿಷಯದ ಕುರಿತು ನರರೋಗ ತಜ್ಞ ಡಾ. ಸಂತೋಷ ಎನ್.ಎಸ್. ಹಾಗೂ ಆರೋಗ್ಯ ಯೋಗದ ಕುರಿತು ಮನಗುಂಡಿಯ ಬಸವಾನಂದ ಸ್ವಾಮೀಜಿ ಉಪನ್ಯಾಸ ನೀಡುವರು ಎಂದು ಹೇಳಿದರು.

ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವ ಸಮಿತಿ ಕಾರ್ಯದರ್ಶಿ ಕೆ.ಎಸ್. ಪಲ್ಲೇದ ಮಾತನಾಡಿ, ಯೋಗ ಶಿಕ್ಷಣ, ಸಾಹಿತ್ಯ, ಕ್ರೀಡೆ, ಪ್ರದರ್ಶನ ಹಾಗೂ ಸಂಘಟನೆ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಡಾ. ಚಂದ್ರಮೌಳಿ ನಾಯ್ಕರ್, ಸಂಗಮೇಶ ಮೇಲ್ಮುರಿ, ಬಸವರಾಜ ಹಡಗಲಿ, ಚನ್ನಪ್ಪಜ್ಜ ಕಾಳಗಿ, ಭವರಲಾಲ್ ಆರ್ಯ ಹಾಗೂ ವಿನಾಯಕ ಕೊಂಗಿ ಅವರಿಗೆ 'ಯೋಗವಸೇವಾ ಸಿರಿ' ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಜತೆಗೆ ಕಾರ್ಯಕ್ರಮದಲ್ಲಿ 50 ಯೋಗಪಟುಗಳಿಂದ ಯೋಗ ಪ್ರದರ್ಶನ ಜರುಗಲಿದೆ ಎಂದು ವಿವರಿಸಿದರು. ಸುದ್ದಿಗೋಷ್ಠಿಯಲ್ಲಿ ಕೆ.ಎಚ್. ಬೇಲೂರ, ಕೆ.ಎಸ್. ಪಲ್ಲೇದ್, ರುದ್ರಣ್ಣ ಗುಳಗುಳಿ, ವಿವೇಕಾನಂದಗೌಡ ಪಾಟೀಲ, ಡಾ. ಎಸ್.ಡಿ. ಯರಗೇರಿ, ಶಿವಲೀಲಾ ಅಕ್ಕಿ, ಅನ್ನಪೂರ್ಣ ವರವಿ, ಇದ್ದರು.




ಗೌರವ ಅತಿಥಿಗಳಾಗಿ ಶಾಸಕ ಜಿ.ಎಸ್. ಪಾಟೀಲ, ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ರಕ್ಷಣಾ ಮಂತ್ರಿಗಳ ಆಪ್ತ ಕಾರ್ಯದರ್ಶಿ ಅಮಿತ್ ಕಿಶೋರ, ಪ್ರೊ.ಲಕ್ಷ್ಮಣಕುಮಾರ ಸಣ್ಣೆಲ್ಲಪ್ಪನವರ, ಶ್ರೀಕಂಠ ಚೌಕಿಮಠ, ಡಾ. ಜಯಪಾಲಸಿಂಗ್ ಸಮೀರೆಕರ ಸೇರಿದಂತೆ ಹಲವರು ಪಾಲ್ಗೊಳ್ಳುವರು ಎಂದು ಎಸ್.ಎಸ್. ಪಟ್ಟಣಶೆಟ್ಟಿ ಮಾಹಿತಿ ನೀಡಿದರು.

ಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗ ಪಾಠಶಾಲೆಗೆ 50 ವರ್ಷಗಳು ಪೂರೈಸಿದ ಹಿನ್ನೆಲೆಯಲ್ಲಿ ಜಿಲ್ಲೆಯ ವಿವಿಧ ಯೋಗ ಸಂಘ, ಸಂಸ್ಥೆಗಳು ಸಹಯೋಗದಲ್ಲಿ ಬೇರೆ ಬೇರೆ ಸ್ಥಳಗಳಲ್ಲಿ ಮೇ. 19ರವರಿಗೆ ಪ್ರತಿ ದಿನ ಬೆಳಗ್ಗೆ 6ರಿಂದ 7.10ರವರೆಗೆ ಉಚಿತ ಆರೋಗ್ಯ-ಯೋಗ ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿದೆ.

# ಒತ್ತಡಮುಕ್ತ ಜೀವನಕ್ಕಾಗಿ 'ರಾಜಯೋಗ ಧ್ಯಾನ'

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸಿದ್ಧರಾಮೇಶ್ವರ ನಗರದ ಆಧ್ಯಾತ್ಮಿಕ ಸಂಸ್ಕೃತಿ ಭವನದಲ್ಲಿ ಮೇ.19ರಂದು ಬೆಳಿಗ್ಗೆ 8ಕ್ಕೆ ಒತ್ತಡ ಮುಕ್ತ ಜೀವನಕ್ಕಾಗಿ ರಾಜಯೋಗ ಧ್ಯಾನ ಕಾರ್ಯಕ್ರಮ ಹಾಗೂ ಈ ವಾರ್ಷಿಕ ಬೃಹತ್ ಸೇವಾ ಯೋಜನೆಯ ಆರಂಭೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಬ್ರಹ್ಮಕುಮಾರಿ ಜಯಂತಿ ಹೇಳಿದರು.




ನಗರದ ಪತ್ರಿಕಾಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಬುಪರ್ವತದ ರಾಜಯೋಗಿನಿ ಬ್ರಹ್ಮಕುಮಾರಿಸ್ ಸಹ ಮುಖ್ಯ ಆಡಳಿತಾಧಿಕಾರಿ ಬಿ.ಕೆ. ಸುದೇಶ ದೀದೀಜಿ ಕಾರ್ಯಕ್ರಮ ಉದ್ಘಾಟಿಸುವರು. ಮಾಜಿ ಶಾಸಕ ಡಿ.ಆರ್. ಪಾಟೀಲ, ಪ್ರಸನ್ನಕುಮಾರ್ ಶಾಬಾದಿಮಠ, ಸವಿತಾ ಶಿಗ್ಲಿ, ಡಾ. ಬಸನಗೌಡ ಕರಿಗೌಡ್ರ, ಡಾ. ಗಿರೀಶ ನಾಗರಾಳ, ರಾಜಶೇಖರ ಬಳ್ಳಾರಿ, ಡಾ. ಜಿ.ಬಿ. ಬಿಡಿನಹಾಳ, ಡಾ. ನಮ್ರತಾ ಸಜ್ಜನರ, ತಾತನಗೌಡ ಪಾಟೀಲ, ರಾಜೇಶ ಕಲ್ಯಾಣಶೆಟ್ಟಿ, ಬಿ.ಬಿ. ಅಸೂಟಿ, ಎಸ್.ಎನ್. ಗುಗ್ಗರಿ, ಬಿ.ಎಸ್. ಗೌಡರ ಸೇರಿದಂತೆ ಪ್ರಮುಖರು ಭಾಗವಹಿಸಲಿದ್ದಾರೆ ಎಂದರು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯವು ಈಶ್ವರೀಯ ಜ್ಞಾನ ಮತ್ತು ಸಹಜ ರಾಜಯೋಗ ಶಿಕ್ಷಣದ ಮೂಲಕ ಜಗತ್ತಿನ ಸುಮಾರು 140 ದೇಶದಲ್ಲಿ ಈ ವರ್ಷ ಪೂರ್ತಿ ವಿಶ್ವ ಏಕತೆ ಮತ್ತು ವಿಶ್ವಾಸಕ್ಕಾಗಿ ಯೋಗ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ. ಸಾರ್ವಜನಿಕ ಕಾರ್ಯಕ್ರಮಗಳನ್ನು ಸೆಮಿನಾರ್‌ಗಳು, ವರ್ಕ್‌ಶಾಪ್, ಸಮ್ಮೇಳನ, ಎಕ್ಸಿಬಿಷನ್, ರ್‍ಯಾಲಿಗಳನ್ನು ಭಾರತದ ಮೂಲೆ ಮೂಲೆಗಳಲ್ಲಿ ಆಯೋಜಿಸಿ ಜನತೆಯಲ್ಲಿ ಆಧ್ಯಾತ್ಮಿಕ ಜಾಗೃತಿಯನ್ನು ಮೂಡಿಸಿ ಮಾನವನ ಮನವನ್ನು ಬೆಸೆಯುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

# ಹುಲಕೋಟಿ ಗ್ರಾಮ ಪಂಚಾಯಿತಿ ಕಟ್ಟಡ ವೀಕ್ಷಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಚುನಾವಣಾ ಆಯುಕ್ತರಾದ ಸಂಗ್ರೇಶಿ ಅವರು ಶುಕ್ರವಾರ ಗದಗ ಜಿಲ್ಲೆಯ ಹುಲಕೋಟಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ನೂತನ ಕಟ್ಟಡವನ್ನು ವೀಕ್ಷಿಸಿದರು.

ಹುಲಕೋಟಿಯಲ್ಲಿ ನೂತನವಾಗಿ ನಿರ್ಮಿಸಿರುವ ಗ್ರಾಮ ಪಂಚಾಯಿತಿ ಕಟ್ಟಡವು ದೇಶದಲ್ಲಿಯೇ ಮಾದರಿಯಾಗಿದೆ. ಸ್ಥಳೀಯ ಆಡಳಿತ ಕೈಗೊಳ್ಳಲು ಈ ರೀತಿಯ ಮಾದರಿ ಕಟ್ಟಡ ನಿರ್ಮಾಣ ಅತ್ಯಗತ್ಯವಾಗಿದೆ. ಈ ಮಾದರಿ ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಿಸಲು ಶ್ರಮಿಸಿದ ಪ್ರತಿಯೊಬ್ಬರೂ ಅಭಿನಂದನೆಗೆ ಅರ್ಹರು ಎಂದು ಪ್ರಶಂಸೆ ವ್ಯಕ್ತ ಪಡಿಸಿದರು. ಗ್ರಾಮ ಪಂಚಾಯಿತಿಯಲ್ಲಿರುವ ಪ್ರತ್ಯೇಕ ಸಭಾ ಭವನ, ಅಧ್ಯಕ್ಷ-ಆಡಳಿತ ವರ್ಗದವರ ಕಾರ್ಯಾಲಯಗಳು ಸುಂದರವಾಗಿದ್ದು, ಗ್ರಾಮ ಪಂಚಾಯಿತಿ ಕಟ್ಟಡದಲ್ಲಿ ಕುಳಿತರೆ ಪ್ರವಾಸಿ ಸ್ಥಳದಲ್ಲಿ ಕುಳಿತಂತಹ ಭಾವನೆ ಬರುತ್ತದೆ ಎಂದು ಸಂತೋಷ ವ್ಯಕ್ತಪಡಿಸಿದರು.

ಗ್ರಾಮ ಆಡಳಿತ ಸುಭದ್ರವಾಗಿ ನಡೆದರೆ ದೇಶ ಅಭಿವೃದ್ಧಿ ಹೊಂದುತ್ತದೆ. ಹಾಗಾಗಿ ಪ್ರತಿ ಗ್ರಾಮ ಪಂಚಾಯಿತಿಯೂ ಹುಲಕೋಟಿಯಂತಹ ಕಟ್ಟಡ ಹೊಂದಿದರೆ ಗ್ರಾಮ ಆಕರ್ಷಕವಾಗಿರುತ್ತದೆ ಎಂದು ನುಡಿದರು. ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಗದಗ ತಾಲೂಕಾ ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಗ್ರಾಮ ಪಂಚಾಯಿತಿ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

# ನೀರು ಪೂರೈಕೆಯಲ್ಲಿ ತಾರತಮ್ಯ: ಗ್ರಾ.ಪಂಗೆ ಮುತ್ತಿಗೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕುಡಿಯುವ ನೀರು ಪೂರೈಕೆಯಲ್ಲಿನ ತಾರತಮ್ಯವನ್ನು ವಿರೋಧಿಸಿ ಇಲ್ಲಿಯ 4ನೇ ವಾರ್ಡಿನ ಮಹಿಳೆಯರು ಶುಕ್ರವಾರ ಗ್ರಾಮ ಪಂಚಾಯಿತಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಖಾಲಿ ಕೊಡ ಹಿಡಿದು ಗ್ರಾಮ ಪಂಚಾಯಿತಿಗೆ ಆಗಮಿಸಿದ ಮಹಿಳೆಯರು ಗ್ರಾ.ಪಂ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಚನ್ನಮ್ಮ ಕಂಠಿ, ರೇಣುಕಾ ಬೇಲೇರಿ, ವಿಜಯಲಕ್ಷ್ಮೀ ಕುಲಕರ್ಣಿ, ಕಳೆದ 8 ತಿಂಗಳಿಂದ 4ನೇ ವಾರ್ಡಿನ ನಮ್ಮ ಭಾಗದಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಗ್ರಾಮ ಪಂಚಾಯಿತಿಯು ತಾರತಮ್ಯ ಮಾಡುತ್ತಿದೆ. 8 ತಿಂಗಳಿಂದ 150 ಮೀಟರ್ ದೂರವಿರುವ ಸಿಸ್ಟನ್ ಮೂಲಕ ನೀರು ತರಲಾಗುತ್ತಿದ್ದು, ಪಕ್ಕದ ವಾರ್ಡಿನಲ್ಲಿ ಪ್ರತಿ ದಿನ ನೀರು ಪೂರೈಕೆ ಮಾಡಿ ತಾರತಮ್ಯ ಮಾಡುತ್ತಿದ್ದಾರೆ. ಈ ಕುರಿತು ವಾಲ್‌ಮನ್‌ನ್ನು ಕೇಳಿದರೆ ಹಾರಿಕೆಯ ಉತ್ತರ ನೀಡುತ್ತಿದ್ದಾರೆ. ವಾರ್ಡಿನ ಜನ ಪ್ರತಿನಿಧಿಗಳಿಗೆ ನೀರು ಪೂರೈಕೆ ಸರಿಪಡಿಸಲು ವಿನಂತಿಸಿಕೊಂಡರೆ ಕಾಳಜಿ ವಹಿಸುತ್ತಿಲ್ಲ. ಹಲವು ಬಾರಿ ಗ್ರಾ.ಪಂ ಅಧಿಕಾರಗಳಿಗೆ ನಮ್ಮ ಸಮಸ್ಯೆ ಹೇಳಿಕೊಂಡರೂ ಸ್ಪಂದಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಾರದೊಳಗೆ ಸಮಸ್ಯೆಯನ್ನು ಸರಿಪಡಿಸದಿದ್ದರೆ ಗ್ರಾ.ಪಂ ಮುಂದೆ ಧರಣಿ ಕೈಗೊಳ್ಳುತ್ತೇವೆ ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ರೇಣವ್ವ ಬಣವಿ, ಸರೋಜವ್ವ ಬಣವಿ, ಗಿರಿಜವ್ವ ಬೇಲೇರಿ, ಶಾಂತವ್ವ ಬಣವಿ, ಚಂಬಮ್ಮ ಬಣವಿ, ರೇಣವ್ವ ಬಣವಿ ಸೇರಿದಂತೆ ಮುಂತಾದವರು ಇದ್ದರು.

ಸ್ಥಳಕ್ಕೆ ಭೇಟಿ ನೀಡಿದ ಎಸ್.ಡಿ.ಎ ಎಂ.ಎ. ಗಾಜಿ, ಆ ಭಾಗದಲ್ಲಿ ನೀರು ಪೂರೈಕೆಯ ಪೈಪ್‌ಲೈನ್ ಒಳಗಡೆ ದುರಸ್ಥಿಗೆ ಬಂದಿದೆ. ಸರಿಪಡಿಸಲು ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ. ಶಾಶ್ವತ ಪರಿಹಾರಕ್ಕಾಗಿ ಈ ಭಾಗದಲ್ಲಿ ನೀರಿನ ಟ್ಯಾಂಕ್ ನಿರ್ಮಾಣ ಮಾಡಲಾಗುವುದು ಎಂದು ತಿಳಿಸಿದ ನಂತರ ಪ್ರತಿಭಟನೆಯನ್ನು ಕೈಬಿಡಲಾಯಿತು.

# ಆಕ್ಷೇಪಣೆಗೆ ಮೇ 27 ಕೊನೆಯ ದಿನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಪಿಎಮ್ ಅಭಿಮ್ ಕಾರ್ಯಕ್ರಮದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿಯಿರುವ 13 ಕಿರಿಯ ಆರೋಗ್ಯ ಸಹಾಯಕ ಹುದ್ದೆಗಳನ್ನು ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಗದಗ ಇಲ್ಲಿ ಅರ್ಜಿ ಆಹ್ವಾನಿಸಲಾಗಿತ್ತು, ಸದರಿ ಸ್ವೀಕರಿಸಲಾದ ಅರ್ಜಿಗಳಿಗೆ ರೋಷ್ಟರ್ ಕಂ ಮೆರಿಟ್ ಅಳವಡಿಸಿದ ರೋಷ್ಟರ್ ಸಂಖ್ಯೆ 03,05,06&07ರ ಅಭ್ಯರ್ಥಿಗಳನ್ನು ಮೂಲದಾಖಲಾತಿಗೆ ಪರಿಶೀಲನೆಗೆ ಆಹ್ವಾನಿಸಲಾಗಿತ್ತು.

ಮೂಲದಾಖಲಾತಿ ಪರಿಶೀಲನೆಯಲ್ಲಿ ಅರ್ಹರಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಿದ್ದು. ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಇದ್ದಲ್ಲಿ ದಿನಾಂಕ:17.05.2025ರ ರಿಂದ 27.05.2025ರ ಸಂಜೆ 4.00 ಗಂಟೆಯವರೆಗೆ ಖುದ್ದಾಗಿ ಕಚೇರಿಗೆ ಬಂದು ಸಲ್ಲಿಸಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಭೆಯು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ.ಸಂಕದ, ಪ್ರಾಧಿಕಾರದ ಆಯುಕ್ತರಾದ ಶರಣು ಗೋಗೇರಿ, ಪ್ರಾಧಿಕಾರದ ಸಲಹಾ ಸಮಿತಿಯ ಸದಸ್ಯರಾದ ಸಿದ್ದು ಪಾಟೀಲ, ಕಟ್ಟಿಮನಿ, ಇತರರು ಹಾಜರಿದ್ದರು.



ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯಾಗಿ ಅಧಿಕಾರ ಸ್ವೀಕರಿಸಿರುವ ಮೆಹಬೂಬ ತುಂಬರಮಟ್ಟಿ ಹಾಗೂ ಗದಗ ಹಿಂದುಳಿದ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ ಅವರು ಕರ್ನಾಟಕರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಹಿಂದುಳಿದ ಸಮುದಾಯಗಳ ಮಹಾಮಂಡಳದ ವತಿಯಿಂದ ಸನ್ಮಾನಿಸಿ, ಗೌರವಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಐಲಿ ಹಾಗೂ ಪದಾಧಿಕಾರಿಗಳಿದ್ದರು.

# ಕೆಎಲ್‌ಇ ಶಾಲೆಗೆ ಉತ್ತಮ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆಎಲ್‌ಇ ಸಂಸ್ಥೆಯ ಸಿಬಿಎಸ್‌ಇ ಶಾಲೆಯು ಶೇಕಡಾ ನೂರರ ಫಲಿತಾಂಶದ ಗರಿಯನ್ನು ದಾಖಲಿಸಿದೆ.

2024-25ನೇ ಶೈಕ್ಷಣಿಕ ವರ್ಷದ ಕೇಂದ್ರೀಯ ಮಾಧ್ಯಮಿಕ ಶಿಕ್ಷಣ ಮಂಡಳಿ ನವದೆಹಲಿ ವತಿಯಿಂದ ನಡೆದ 10ನೇ ತರಗತಿಯ ವಾರ್ಷಿಕ ಪರೀಕ್ಷೆಯ ವೈಯಕ್ತಿಕ ಫಲಿತಾಂಶದಲ್ಲಿ ಪರಮ್ ಜಿ.ಎಂ ಶೇ. 95 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ, ರಶ್ಮಿ ಚಂದ್ರಶೇಖರ ತಡಸದ ಶೇ. 94.80 ಅಂಕಗಳನ್ನು ಪಡೆದು ಶಾಲೆಗೆ ದ್ವಿತೀಯ ಸ್ಥಾನ, ಸಿಂಚನಾ ಅಸೂಟಿ ಶೇ. 94.40 ಅಂಕಗಳನ್ನು ಪಡೆದು ಶಾಲೆಗೆ ತೃತೀಯ ಸ್ಥಾನ ಪಡೆದಿದ್ದಾರೆ. ಶಾಲೆಯ 12 ವಿದ್ಯಾರ್ಥಿಗಳು ಶೇ. 90ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.



ಶಾಲೆಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಸಂಸ್ಥೆಯ ಕಾರ್ಯಾಧ್ಯಕ್ಷರು, ಚೇರಮನ್ನರು, ನಿರ್ದೇಶಕರು, ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಪ್ರಾಂಶುಪಾಲರು, ಶಿಕ್ಷಕ/ಶಿಕ್ಷಕೇತರ ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ.

## ಕಂದಾಯ ಇಲಾಖೆಯಿಂದ 1 ಲಕ್ಷ ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಣೆ ಮಾಡುತ್ತೇವೆ

■ ವಿಜಯಸಾಕ್ಷಿ ಸುದ್ದಿ, ವಿಜಯನಗರ

ಕಂದಾಯ ಇಲಾಖೆಯಿಂದ 1 ಲಕ್ಷ ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಣೆ ಮಾಡುತ್ತೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿ ಮಾತನಾಡಿದ ಅವರು, 5 ಗ್ಯಾರಂಟಿ ಅನುಷ್ಠಾನ ಹಿನ್ನೆಲೆಯಲ್ಲಿ ನಾವು ನಾನಾ ಕಡೆ ಸಮಾವೇಶ ಮಾಡಿದ್ದೇವೆ ಎಂದರು.

ಕಂದಾಯ ಇಲಾಖೆಯಿಂದ 1 ಲಕ್ಷ ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಣೆ ಮಾಡುತ್ತೇವೆ. ಪಕ್ಷ, ಸರಕಾರ ಒಟ್ಟಿಗೆ ಸೇರಿ ದೊಡ್ಡ ಕಾರ್ಯಕ್ರಮ ಮಾಡುತ್ತಿದ್ದೇವೆ.

# ಆರ್ಥಿಕ ಸಹಾಯಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕಡುಬಡವ ಅರ್ಹ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಧಾರವಾಡದ ವಿದ್ಯಾಪೋಷಕ ಸಂಸ್ಥೆಯು ನರ್ಚರ್ ಮೆರಿಟ್ ಯೋಜನೆಯಡಿಯಲ್ಲಿ 2025-26ನೇ ಶೈಕ್ಷಣಿಕ ಸಾಲಿಗಾಗಿ ಆರ್ಥಿಕ ಸಹಾಯವನ್ನು ನೀಡಲು ಮುಂದಾಗಿದೆ.

10ನೇ ತರಗತಿ ನಂತರದ ಶಿಕ್ಷಣ ಮುಂದುವರಿಕೆಗಾಗಿ ಆರ್ಥಿಕ ಸಹಾಯ್ಯಕಾಗಿ ಅರ್ಜಿ ಹಾಕಲು ವಿದ್ಯಾರ್ಥಿಗಳು ಪ್ರಥಮ ಬಾರಿ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಮಾರ್ಚ್ 2025ರಲ್ಲಿ ಬರೆದಿರಬೇಕು.

ಮೊದಲನೇ ಪ್ರಯತ್ನದಲ್ಲಿ ಶೇ. 80ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಪಿ.ಯು.ಸಿ 1ನೇ ವರ್ಷದ ವಾಣಿಜ್ಯ ಮತ್ತು ಡಿಪ್ಲೋಮಾ ಕೋರ್ಸ್‌ಗೆ ಸೇರಲು ಬಯಸುವ ವಿದ್ಯಾರ್ಥಿಗಳು ಈ ಅರ್ಜಿಯನ್ನು ಸಲ್ಲಿಸಬಹುದು. ಕುಟುಂಬದ ವಾರ್ಷಿಕ ವರಮಾನ ರೂ. 1,20,000ಕ್ಕಿಂತ ಕಡಿಮೆ ಇರಬೇಕು. ವಿದ್ಯಾರ್ಥಿಯ ಪಾಲಕರು/ಪೋಷಕರು ಧಾರವಾಡ, ಗದಗ, ಹಾವೇರಿ, ಬೆಳಗಾವಿ, ಉತ್ತರ ಕನ್ನಡ, ಶಿವಮೊಗ್ಗ, ವಿಜಯಪುರ, ಬಾಗಲಕೋಟೆ, ದಾವಣಗೆರೆ ಹಾಗೂ ಕೊಪ್ಪಳ ಜಿಲ್ಲೆಗಳಲ್ಲಿ ವಾಸವಿರಬೇಕು. ವಿದ್ಯಾಪೋಷಕ ನರ್ಚರ್ ಮೆರಿಟ್ ಕಾರ್ಯಕ್ರಮವು ಸ್ವಯಂಸೇವಕರ ಲಭ್ಯತೆಯ ಮೇಲೆ ಅವಲಂಬಿತವಾಗಿರುತ್ತದೆ. ಹೊಸ ಅರ್ಜಿಯನ್ನು 2025-26 ಪರಿಗಣಿಸುವುದು ಕೆಲವೊಂದು (ಸ್ವಯಂಸೇವಕರು ಲಭ್ಯವಿರುವ) ಜಿಲ್ಲಾ ಅಥವಾ ತಾಲೂಕುಗಳಿಗೆ ಮಾತ್ರ ಸೀಮಿತವಾಗಿರುತ್ತದೆ.

ಧನ ಸಹಾಯದ ಅರ್ಜಿಯು ವಿದ್ಯಾಪೋಷಕ ಸಂಸ್ಥೆಯ ಅಂತರ್ಜಾಲ www.vidya-poshak.ngoದಲ್ಲಿ ಲಭ್ಯವಿದೆ. ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್ ಮೂಲಕ ಅದರಲ್ಲಿ ನಮೂದಿಸಿರುವ ಮಾಹಿತಿಯನ್ನು ತುಂಬಿ ಅಗತ್ಯ ದಾಖಲಾತಿಗಳನ್ನು ಅಪ್‌ಲೋಡ್ ಮಾಡಬೇಕು. ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜೂನ್ 10 ಆಗಿದೆ. ಹೆಚ್ಚಿನ ಮಾಹಿತಿಗಾಗಿ ವಿದ್ಯಾಪೋಷಕ, ನಂ. 307/4ಎ1, ನಗರಕರ ಕಾಲೋನಿ, ಮಹಿಷಿ ರಸ್ತೆ, ಮಾಳಮಡ್ಡಿ ಧಾರವಾಡ, ದೂರವಾಣಿ ಸಂಖ್ಯೆ: 0836-2747357ನ್ನು ಸಂಪರ್ಕಿಸಬಹುದು. ಗದಗ ಜಿಲ್ಲೆಯ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಡಾ. ಸಂಗಮೇಶ ಸಜ್ಜನರ, ಮೊ- 9945555084, ಡಾ.ಪ್ರಭು ಗಂಜಿಹಾಳ, ಮೊ-9448775346, ಡಾ. ಪಿ.ಎಸ್. ಕಣವಿ, ಮೊ-9449121688, ಪ್ರೊ. ಎಚ್.ಎನ್. ಕಾಳೆ ಮೊ-9108992921 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka